ಸಂಪಾದಕರು : ಎ.ಕೆ ಮಲ್ಲಿಕಾರ್ಜುನ ▪ ಸಂಪುಟ : 01 ▪ ಸಂಚಿಕೆ : 30 ▪ ಪುಟ : 04 ▪ ಬೆಲೆ : 02 ▪ 06-07-2026 ▪ ಸೋಮವಾರ ▪ ಬಳ್ಳಾರಿ

# ಗಣಿನಾಡ ವಾಣಿ

GANINAADA VAANI

E-mail : ganinaadavaani@gmail.com RNI No: KNKAN/26/A0397

ಸುದ್ದಿ ಹಾಗೂ ಆಕರ್ಷಕ ವಿನ್ಯಾಸದ ಜಾಹೀರಾತುಗಳಿಗಾಗಿ ಸಂಪರ್ಕಿಸಿ

9743034347

9900966891

2 ಹಿರಿಯ ಪತ್ರಕರ್ತ ಗಿರಿ ಯಾದವ್ ಅವರ 47ನೇ ಜನ್ಮದಿನಾಚರಣೆ

3 ಜೆಸ್ಕಾಂ ಕಚೇರಿ ಕಟ್ಟಡ ಕಾಮಗಾರಿ ಆರಂಭ

4 ಬರ ನಿರ್ವಹಣೆ ಸರ್ಕಾರದಿಂದ ಸಲಕ ಸಿದ್ಧತೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ : ಡಾ. ಜಿ. ಪರಮೇಶ್ವರ

# ಪರಿಸರ ಕಾಳಜಿ ಕೇವಲ ಒಂದು ದಿನಕ್ಕೆ ಸೀಮಿತ ಬೇಡ

## ವನಮಹೋತ್ಸವ ಅಂಗವಾಗಿ 'ಗ್ರೀನ್ ಮಾರ್ಚ್'ನಲ್ಲಿ ಎಸ್ಪಿ ಡಾ.ಸುಮನ್ ಡಿ.ಪೆನ್ನೇಕರ್



▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಪರಿಸರ ಸಂರಕ್ಷಣೆ, ಮರಗಳನ್ನು ಬೆಳೆಸುವುದು ಕೇವಲ ವರ್ಷಕ್ಕೊಮ್ಮೆ ಮಾಡುವ ಸಾಂಕೇತಿಕ ಆಚರಣೆಯಾಗಬಾರದು. ಬದಲಿಗೆ ಅದು ನಮ್ಮ ದೈನಂದಿನ ಜೀವನಶೈಲಿಯಾಗಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಅವರು ಕರೆ ನೀಡಿದರು.

ವನಮಹೋತ್ಸವ 2026 ರ ಅಂಗವಾಗಿ ಬಳ್ಳಾರಿ ಪ್ರಾದೇಶಿಕ ಅರಣ್ಯ ವಿಭಾಗದ ವತಿಯಿಂದ ಪರಿಸರ ಜಾಗೃತಿ ಮೂಡಿಸುವ ಉದ್ದೇಶದಿಂದ ನಗರದ ರೇಡಿಯೋ ಪಾರ್ಕ್ ಬಳಿಯ ಪ್ರಾದೇಶಿಕ ಅರಣ್ಯ ವಿಭಾಗ ಕಚೇರಿ ಆವರಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ 'ಗ್ರೀನ್ ಮಾರ್ಚ್' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಳ್ಳಾರಿಯಲ್ಲಿ ದಿನದಿಂದ ದಿನಕ್ಕೆ ತಾಪಮಾನವು ಗಣನೀಯವಾಗಿ ಹೆಚ್ಚಾಗುತ್ತಿದೆ. ಇದಕ್ಕೆ ಹಸಿರು ಕ್ರಾಂತಿಯೊಂದೇ ಸೂಕ್ತ ಪರಿಹಾರ. ನಾವು ಎಷ್ಟು ಹೆಚ್ಚು ಮರ-ಗಿಡಗಳನ್ನು ನೆಟ್ಟು ಪೋಷಿಸುತ್ತೇವೆಯೋ, ಅಷ್ಟು ಹಿತಕರವಾದ ವಾತಾವರಣವನ್ನು ನಮ್ಮ ಮುಂದಿನ ಪೀಳಿಗೆಗೆ ನೀಡಬಹುದು ಎಂದು ತಿಳಿಸಿದರು.

ಗಿಡಗಳನ್ನು ನೆಡುವ ಪ್ರಕ್ರಿಯೆಯಲ್ಲಿ ಮಕ್ಕಳ ಪಾತ್ರ ದೊಡ್ಡದಿದೆ. ಮಕ್ಕಳ ಬೆಳವಣಿಗೆಯ ಜೊತೆ ಜೊತೆಗೆ ಅವರು ನೆಟ್ಟ ಸಸಿಗಳು ಬೆಳೆಯುವುದನ್ನು ನೋಡುವುದೇ ಒಂದು ಸಂಭ್ರಮ. ನಮ್ಮ ಶಾಲಾ ದಿನಗಳಲ್ಲಿ ಸಸಿಗಳನ್ನು ನೆಟ್ಟು, ಅವುಗಳ ಬೆಳವಣಿಗೆಯನ್ನು ಪ್ರಾಯೋಗಿಕವಾಗಿ ದಾಖಲಿಸುವ ಚಟುವಟಿಕೆಗಳಿದ್ದವು. ಇಂತಹ ಹವ್ಯಾಸಗಳು ಇಂದಿನ ಮಕ್ಕಳಿಗೂ ಅತ್ಯಗತ್ಯ ಎಂದರು.

ಪ್ರತಿ ವರ್ಷ ಅರಣ್ಯ ಇಲಾಖೆಯು ಸಸಿಗಳನ್ನು ನೆಡುವ ಇಂತಹ ಹತ್ತಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ. ಪ್ರತಿಯೊಬ್ಬ ನಾಗರಿಕನೂ ಕೇವಲ ಸಸಿ ನೆಡುವುದಷ್ಟೇ ಅಲ್ಲದೆ, ಅದನ್ನು ಹೆಮ್ಮರವಾಗಿಸುವವರೆಗೆ ಪೋಷಿಸುವ ಜವಾಬ್ದಾರಿ ಹೊರಬೇಕು ಎಂದು ತಿಳಿಸಿದರು.ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಪರಿಸರ ಇದ್ದರೆ ನಾವು ಇರುತ್ತೇವೆ, ಪರಿಸರ ಇಲ್ಲದಿದ್ದರೆ ನಮ್ಮ ಅಸ್ತಿತ್ವವೇ ಇರಲ್ಲ, ಸುಸ್ಥಿರ ಅಭಿವೃದ್ಧಿಯ ಹಾದಿಯಲ್ಲಿ ಸಾಗಿದರೆ ಮಾತ್ರ ನಮ್ಮ ಭವಿಷ್ಯ ಚೆನ್ನಾಗಿರಲು ಸಾಧ್ಯ. ಇದಕ್ಕಾಗಿ ಯುವ ಪೀಳಿಗೆಯು ಅರಣ್ಯೀಕರಣ, ಸಾಮಾಜಿಕ ಅರಣ್ಯೀಕರಣ ಹಾಗೂ ಸಸಿ ನೆಡುವ ಕಾರ್ಯಕ್ರಮಗಳಿಗೆ ನಿರಂತರ ಬೆಂಬಲ ನೀಡಬೇಕು ಎಂದು ಆಶಿಸಿದರು.

ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಕೆ.ಎನ್ ಬಸವರಾಜ ಅವರು ಮಾತನಾಡಿ, ದೇಶಾದ್ಯಂತ ಜುಲೈ 1 ರಿಂದ 7 ನೇ ತಾರೀಖಿನವರೆಗೆ ವನಮಹೋತ್ಸವ ಸಪ್ತಾಹವನ್ನು ಆಚರಿಸಲಾಗುತ್ತಿದ್ದು, ಸಾರ್ವಜನಿಕರಲ್ಲಿ ಪರಿಸರ ಸಂರಕ್ಷಣೆ ಮತ್ತು ಹಸಿರನ್ನು ಹೆಚ್ಚಿಸುವ ಕುರಿತು ಜಾಗೃತಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಸಾಮಾನ್ಯವಾಗಿ ಜೂನ್ ಮೊದಲ ವಾರದಲ್ಲಿ ಕರ್ನಾಟಕಕ್ಕೆ ಮುಂಗಾರು ಪ್ರವೇಶಿಸಿದರೂ, ದೇಶಾದ್ಯಂತ ಸಂಪೂರ್ಣವಾಗಿ ಮಳೆಗಾಲ ಆರಂಭವಾಗುವುದು ಜೂನ್ ಅಂತ್ಯಕ್ಕೆ. ಈ ಹಿನ್ನೆಲೆಯಲ್ಲಿ, ಗಿಡಗಳನ್ನು ನೆಟ್ಟು ಪೋಷಿಸಲು ಜುಲೈ ಮೊದಲ ವಾರ ಅತ್ಯಂತ ಸೂಕ್ತವಾದ ಸಮಯವೆಂದು ಪರಿಗಣಿಸಿ ಈ ಸಪ್ತಾಹವನ್ನು ಆಚರಿಸಲಾಗುತ್ತದೆ. ಪ್ರಕೃತಿಯನ್ನು ಇಂದಿನ ಸ್ಥಿತಿಗಿಂತಲೂ ಉತ್ತಮ ರೀತಿಯಲ್ಲಿ ಮುಂದಿನ ಪೀಳಿಗೆಗೆ ಹಸ್ತಾಂತರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಅವರು ಪ್ರತಿಪಾದಿಸಿದರು.

ಗಣ್ಯರು 'ಗ್ರೀನ್ ಮಾರ್ಚ್' (ಪರಿಸರ ಜಾಥಾ) ಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಜಾಥಾವು ಪ್ರಾದೇಶಿಕ ಅರಣ್ಯ ವಿಭಾಗ ಕಚೇರಿ ಆವರಣದಿಂದ ಆರಂಭಗೊಂಡು, ಕೌಲ್ ಬಜಾರ್ ಮಾರ್ಗವಾಗಿ ಸಾಗಿ ಟಿ.ಬಿ. ಸಾನಿಟೋರಿಯಂ ಆವರಣದಲ್ಲಿ ಅಂತ್ಯಗೊಂಡಿತು. ಬಳಿಕ ಅಲ್ಲಿ ಸಸಿಗಳನ್ನು ನೆಡಲಾಯಿತು.ಕಾರ್ಯಕ್ರಮದಲ್ಲಿ ಸಸಿಗಳನ್ನು ನೆಡುವ ಮೂಲಕ ಪರಿಸರ ರಕ್ಷಣೆಯ ಸಂಕಲ್ಪ ಮಾಡಲಾಯಿತು ಹಾಗೂ ಜಾಥದಲ್ಲಿ ಭಾಗವಹಿಸಿದವರೆಲ್ಲರಿಗೂ ಸಸಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಪಂ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಉಪ ಅರಣ್ಯ ಸಂರಕ್ಷಣಾಧಿಕಾರಿ ಡಿ.ಕೆ. ಗಿರೀಶ್ ಕುಮಾರ್ ಸೇರಿದಂತೆ ಅರಣ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ಶಾಲಾ- ಕಾಲೇಜುಗಳ ಪ್ರಾಂಶುಪಾಲರು, ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

### ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ

ವಿದ್ಯಾರ್ಥಿಗಳು ನೀವಿನ್ನೂ ವೋಟ್ ಮಾಡದೇ ಇರಬಹುದು, ಆದರೆ ಎಸ್‌ಐಆರ್ ಬಗ್ಗೆ ಜಾಗೃತಿ ಇರಬೇಕು. ನಿಮ್ಮ ಕುಟುಂಬದ ಸದಸ್ಯರ ಹೆಸರು ಹಳೆಯ ಮತದಾರರ ಪಟ್ಟಿಯಲ್ಲಿ ಎಲ್ಲಿದೆ ಎಂಬುದನ್ನು ಪರಿಶೀಲಿಸಿ, ಎನ್ಯೂಮರೇಷನ್ ಫಾರ್ಮ್ಸ್ ಹಾಗೂ ಪ್ರೊಜನಿ ಮ್ಯಾಪಿಂಗ್ ಪ್ರಕ್ರಿಯೆಗಳನ್ನು ಸರಿಯಾಗಿ ಭರ್ತಿ ಮಾಡಲು ಸಹಾಯ ಮಾಡಬೇಕು. ಒಂದು ವೇಳೆ ಈ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ತಪ್ಪುಗಳಾದರೆ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟು ಹೋಗುವ ಸಾಧ್ಯತೆ ಇರುತ್ತದೆ.

ಇದರಿಂದಾಗಿ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳಿಂದಲೂ ವಂಚಿತರಾಗಬೇಕಾಗಬಹುದು ಎಂದು ಎಸ್‌ಐಆರ್ ಕುರಿತು ಯುವಕರಲ್ಲಿ ಜಾಗೃತಿ ಮೂಡಿಸಿದರು.

# ವಿದ್ಯುತ್ ಖಾಸಗೀಕರಣ ಕೈಬಿಟ್ಟಿರುವುದಕ್ಕೆ ಸಿಎಂಗೆ ತುಂಗಭದ್ರಾ ರೈತ ಸಂಘದ ಅಭಿನಂದನೆ



▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ರಾಜ್ಯ ಸರ್ಕಾರ ವಿದ್ಯುತ್ ಖಾಸಗೀಕರಣದ ಪ್ರಸ್ತಾವವನ್ನು ಕೈಬಿಟ್ಟಿರುವುದನ್ನು ಸ್ವಾಗತಿಸಿ ತುಂಗಭದ್ರಾ ರೈತ ಸಂಘದ ಪದಾಧಿಕಾರಿಗಳು ಸನ್ಮಾನ್ಯ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದರು.

ಜುಲೈ 4ರಂದು ಸಂಜೆ ಬೆಂಗಳೂರಿನ ಗೃಹ ಕಚೇರಿ 'ಕೃಷ್ಣ'ದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾದ ತುಂಗಭದ್ರಾ ರೈತ ಸಂಘದ ಪ್ರತಿನಿಧಿಗಳು ಹಸಿರು ಶಾಲು ಹೊದಿಸಿ ಗೌರವಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಸಂಘದ ಮುಖಂಡರು ಮಾತನಾಡಿ, ಕರ್ನಾಟಕದ ರೈತರು ಬಾವಿ, ಬೋರ್‌ವೆಲ್, ಕೆರೆ, ಹಳ್ಳ, ಹೊಳೆ, ನದಿ ಹಾಗೂ ಏತ ನೀರಾವರಿ ವ್ಯವಸ್ಥೆಗಳ ಮೂಲಕ ಕೃಷಿ ಮತ್ತು ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ವಿದ್ಯುತ್ ಅತ್ಯಂತ ಅಗತ್ಯವಾಗಿದೆ.

ಸರ್ಕಾರ 10 ಎಚ್‌ಪಿ ವರೆಗೆ ಉಚಿತ ವಿದ್ಯುತ್ ನೀಡುತ್ತಿರುವುದರಿಂದ ರೈತರು ಕೃಷಿ ಚಟುವಟಿಕೆಗಳನ್ನು ಯಶಸ್ವಿಯಾಗಿ ನಡೆಸಲು ಸಾಧ್ಯವಾಗಿದೆ ಎಂದು ತಿಳಿಸಿದರು.

ಇತ್ತೀಚೆಗೆ ವಿದ್ಯುತ್ ಖಾಸಗೀಕರಣದ ಕುರಿತು ಚರ್ಚೆ ನಡೆದಾಗ ರಾಜ್ಯದ ರೈತರಲ್ಲಿ ಆತಂಕ ಉಂಟಾಗಿತ್ತು.

ಖಾಸಗೀಕರಣ ಕೈಬಿಡುವಂತೆ ವಿವಿಧ ರೈತ ಸಂಘಟನೆಗಳು ಸರ್ಕಾರಕ್ಕೆ ಮನವಿ ಸಲ್ಲಿಸಿದ್ದವು. ತುಂಗಭದ್ರಾ ರೈತ ಸಂಘವೂ ಮುಖ್ಯಮಂತ್ರಿ ಹೊಸಪೇಟೆಗೆ ಆಗಮಿಸಿದ ಸಂದರ್ಭದಲ್ಲಿ ವಿದ್ಯುತ್ ಖಾಸಗೀಕರಣ ಮಾಡಬಾರದು ಎಂದು ಮನವಿ ಸಲ್ಲಿಸಿತ್ತು ಎಂದು ಅವರು ಹೇಳಿದರು.

ರಾಜ್ಯದ ರೈತರ ಮನವಿಗೆ ಸ್ಪಂದಿಸಿದ ಸರ್ಕಾರ ವಿದ್ಯುತ್ ಖಾಸಗೀಕರಣದ ನಿರ್ಧಾರವನ್ನು ಕೈಬಿಟ್ಟಿರುವುದು ರೈತ ಸಮುದಾಯಕ್ಕೆ ಸಂತಸ ತಂದಿದ್ದು, ಈ ನಿರ್ಧಾರದಿಂದ ರೈತರ ಹಿತಾಸಕ್ತಿ ಕಾಪಾಡಲಾಗಿದೆ ಎಂದು ಸಂಘದ ಪದಾಧಿಕಾರಿಗಳು ಅಭಿಪ್ರಾಯಪಟ್ಟರು.

ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ತುಂಗಭದ್ರಾ ರೈತ ಸಂಘದ ವತಿಯಿಂದ ಹಸಿರು ಶಾಲು ಹೊದಿಸಿ ಅಭಿನಂದನೆ ಸಲ್ಲಿಸಿ, ರೈತಪರ ನಿರ್ಧಾರ ಕೈಗೊಂಡಿರುವುದಕ್ಕೆ ಕೃತಜ್ಞತೆ ವ್ಯಕ್ತಪಡಿಸಲಾಯಿತು.

ಈ ಕುರಿತು ತುಂಗಭದ್ರಾ ರೈತ ಸಂಘದ ಬಳ್ಳಾರಿ ಜಿಲ್ಲೆ ಅಧ್ಯಕ್ಷ ಡಾ. ಪುರುಷೋತ್ತಮ್ ಗೌಡ ಮಾಹಿತಿ ನೀಡಿದ್ದಾರೆ.

# ಶಾಶ್ವತ ಕುಡಿಯುವ ನೀರಿನ ಕೆರೆ ನಿರ್ಮಾಣಕ್ಕೆ ಒತ್ತಾಯಿಸಿ ಡಿವೈಎಫ್‌ಐ ಧರಣಿ ಮೂರನೇ ದಿನಕ್ಕೆ



▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಡಿವೈಎಫ್‌ಐ ಸಂಘಟನೆಯ ನೇತೃತ್ವದಲ್ಲಿ ಕೊಳಗಲ್ಲು ಗ್ರಾಮದಲ್ಲಿ ಶಾಶ್ವತ ಕುಡಿಯುವ ನೀರಿನ ಕೆರೆ ನಿರ್ಮಿಸುವಂತೆ ಒತ್ತಾಯಿಸಿ ನಡೆಸುತ್ತಿರುವ ಅನಿರ್ದಿಷ್ಟಾವಧಿಯ ಹಗಲು-ರಾತ್ರಿ ಧರಣಿ ಶುಕ್ರವಾರ ಮೂರನೇ ದಿನವೂ ಮುಂದುವರಿಯಿತು.

ಗ್ರಾಮದ ಜನತೆಗೆ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಹಾಗೂ ವಿವಿಧ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂದು ಆಗ್ರಹಿಸಿ ಗ್ರಾಮಸ್ಥರು ಹಾಗೂ ಡಿವೈಎಫ್‌ಐ ಕಾರ್ಯಕರ್ತರು ನಿರಂತರ ಪ್ರತಿಭಟನೆ ನಡೆಸುತ್ತಿದ್ದಾರೆ.

ಧರಣಿ ಸ್ಥಳಕ್ಕೆ ಜಿಲ್ಲಾಧಿಕಾರಿಗಳು, ಸ್ಥಳೀಯ ಶಾಸಕರು, ಸಂಸದರು ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಆಗಮಿಸಿ, ಗ್ರಾಮದ ಕುಡಿಯುವ ನೀರಿನ ಕೆರೆ ನಿರ್ಮಾಣ ಸೇರಿದಂತೆ ವಿವಿಧ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಸ್ಪಷ್ಟ ಭರವಸೆ ನೀಡುವವರೆಗೆ ಹೋರಾಟವನ್ನು ಹಿಂತೆಗೆದುಕೊಳ್ಳುವುದಿಲ್ಲ ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದ್ದಾರೆ.

ಗ್ರಾಮದ ಜನರ ಬಹುಕಾಲದ ಬೇಡಿಕೆಗಳಿಗೆ ಸರ್ಕಾರ ಮತ್ತು ಜಿಲ್ಲಾಡಳಿತ ಶೀಘ್ರ ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ಹೋರಾಟಕ್ಕೆ ಸಾರ್ವಜನಿಕರು ಹಾಗೂ ಎಲ್ಲಾ ಪತ್ರಿಕಾ ಮತ್ತು ಮಾಧ್ಯಮ ಪ್ರತಿನಿಧಿಗಳು ಬೆಂಬಲ ಮತ್ತು ಸಹಕಾರ ನೀಡುವಂತೆ ಡಿವೈಎಫ್‌ಐ ಸಂಘಟನೆಯ ಯರಿಸ್ವಾಮಿ ಹಾಗೂ ಊರಿನ ಮುಖಂಡರು ಮನವಿ ಮಾಡಿದ್ದಾರೆ.

# ಬರ ಪರಿಸ್ಥಿತಿಯಲ್ಲಿ ಸಾರ್ವಜನಿಕರು ಹತ್ತಿರದ ಆಸ್ಪತ್ರೆಗಳಲ್ಲೇ ಉಚಿತ ಆರೋಗ್ಯ ಸೇವೆ ಪಡೆಯಿರಿ : ಡಿಹೆಚ್‌ಓ

▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಬರದಂತಹ ಕಠಿಣ ಪರಿಸ್ಥಿತಿಯಲ್ಲಿ ರೈತರು ಮತ್ತು ಸಾರ್ವಜನಿಕರು ಆರ್ಥಿಕ ಸಂಕಷ್ಟದ ಜೊತೆಗೆ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಸಮಸ್ಯೆಗಳನ್ನು ಎದುರಿಸುತ್ತಾರೆ. ಈ ಸಮಯದಲ್ಲಿ ಸಾರ್ವಜನಿಕರು ವಿನಾಕಾರಣ ಖರ್ಚು-ವೆಚ್ಚ ಮಾಡದೆ, ತಮಗೆ ಲಭ್ಯವಿರುವ ಸರ್ಕಾರಿ ಆಸ್ಪತ್ರೆಗಳ ಉಚಿತ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಜನರ ಆಸರೆಗಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಗ್ರಾಮ ಮಟ್ಟದಲ್ಲಿ ಹಲವು ವಿಶೇಷ ಮತ್ತು ಉಚಿತ ಆರೋಗ್ಯ ಸೇವೆಗಳನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರು ನಗರ ಪ್ರದೇಶಗಳಿಗೆ ಅಲೆಯುವ ಅಗತ್ಯವಿಲ್ಲ ಎಂದು ಅವರು ತಿಳಿಸಿದ್ದಾರೆ.

**ಗ್ರಾಮ ಮಟ್ಟದಲ್ಲೇ ವಿಶೇಷ ಆರೋಗ್ಯ ಶಿಬಿರಗಳು:** ಬರದಂತಹ ಸ್ಥಿತಿ ಎದುರಿಸುವ ಹಳ್ಳಿಗಳ ಜನರು ಆಸ್ಪತ್ರೆಗಳಿಗೆ ಅಲೆಯುವುದನ್ನು ತಪ್ಪಿಸಲು ಆರೋಗ್ಯ ಇಲಾಖೆಯೇ ಹಳ್ಳಿಗಳ ಕಡೆಗೆ ಬರಲಿದೆ. ಗ್ರಾಮ ಮಟ್ಟದಲ್ಲಿ ಉಚಿತ ತಪಾಸಣಾ ಶಿಬಿರಗಳನ್ನು ನಡೆಸಿ ರಕ್ತದೊತ್ತಡ, ಮಧುಮೇಹ ಮತ್ತು ಕಣ್ಣಿನ ಉಚಿತ ತಪಾಸಣೆ ಮಾಡಿ, ಅಗತ್ಯ ಮಾತ್ರೆ ಹಾಗೂ ಕನ್ನಡಕಗಳನ್ನು ಉಚಿತವಾಗಿ ನೀಡಲಾಗುವುದು. ಆಸ್ಪತ್ರೆಗಳಿಲ್ಲದ ದೂರದ ಹಳ್ಳಿಗಳಿಗೆ ಸಂಚಾರಿ ಆರೋಗ್ಯ ಘಟಕಗಳು ಭೇಟಿ ನೀಡಿ ಪ್ರಾಥಮಿಕ ಚಿಕಿತ್ಸೆ ಒದಗಿಸಲಿವೆ.

**ಸಾಂಕ್ರಾಮಿಕ ರೋಗಗಳ ತಡೆ ಹಾಗೂ ಕುಡಿಯುವ ನೀರು ಪರೀಕ್ಷೆ:** ಮಳೆ ಕೊರತೆಯ ಸಮಯದಲ್ಲಿ ನೀರಿನ ಅಭಾವದಿಂದ ಕಾಮಾಲೆ, ಕಾಲರಾ, ಟೈಫಾಯಿಡ್ ಮತ್ತು ಚರ್ಮರೋಗಗಳಂತಹ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ.



ಗ್ರಾಮೀಣ ಭಾಗದ ನೀರಿನ ಮೂಲಗಳಾದ ಬೋರ್‌ವೆಲ್ ಹಾಗೂ ಟ್ಯಾಂಕರ್ ನೀರನ್ನು ನಿಯಮಿತವಾಗಿ ಕ್ಲೋರಿನೇಷನ್ ಮಾಡಲು ಮತ್ತು ನೀರಿನ ಗುಣಮಟ್ಟವನ್ನು ಉಚಿತವಾಗಿ ಜೈವಿಕ ಪರೀಕ್ಷೆ ಮಾಡಲು ಇಲಾಖೆ ಕ್ರಮ ಕೈಗೊಂಡಿದೆ.

**ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳಿಗೆ ಪೌಷ್ಟಿಕಾಂಶ:** ಆರ್ಥಿಕ ಮುಗ್ಗಟ್ಟಿನಿಂದಾಗಿ ಮಹಿಳೆಯರು ಮತ್ತು ಮಕ್ಕಳಲ್ಲಿ ಪೌಷ್ಟಿಕಾಂಶದ ಕೊರತೆ ಕಾಡದಂತೆ ತಡೆಯಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ವಿಶೇಷ ಸೇವೆ ನೀಡಲಾಗುತ್ತಿದೆ. ಗರ್ಭಿಣಿ ಮತ್ತು ಬಾಣಂತಿಯರಿಗೆ ರಕ್ತಹೀನತೆ ತಡೆಯಲು ಕಬ್ಬಿಣದಂಶ ಹಾಗೂ ಫೋಲಿಕ್ ಆಸಿಡ್ ಮಾತ್ರೆಗಳನ್ನು ಉಚಿತವಾಗಿ ನೀಡಲಾಗುವುದು.

**ಉಚಿತ ತುರ್ತು ಸೇವೆ ಹಾಗೂ ರೂ.5 ಲಕ್ಷದವರೆಗೆ ಆರೋಗ್ಯ ವಿಮೆ:** ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ ಯೋಜನೆಯಡಿ ಬರಗಾಲದ ಸಮಯದಲ್ಲಿ ಬರುವ ಯಾವುದೇ ದೊಡ್ಡ ಕಾಯಿಲೆ ಅಥವಾ ಶಸ್ತ್ರಚಿಕಿತ್ಸೆಗೆ ನೋಂದಾಯಿತ ಆಸ್ಪತ್ರೆಗಳಲ್ಲಿ ರೈತರಿಗೆ ಹಾಗೂ ಕೂಲಿ ಕಾರ್ಮಿಕ ಕುಟುಂಬಗಳಿಗೆ ವರ್ಷಕ್ಕೆ ರೂ.5 ಲಕ್ಷದವರೆಗೆ ಸಂಪೂರ್ಣ ಉಚಿತ ನಗದು ರಹಿತ ಚಿಕಿತ್ಸೆ ಸಿಗಲಿದೆ. ಯಾವುದೇ ತುರ್ತು ಆರೋಗ್ಯ ಸಮಸ್ಯೆಯ ಸಂದರ್ಭದಲ್ಲಿ ರೋಗಿಗಳನ್ನು ಉಚಿತವಾಗಿ ಹತ್ತಿರದ ಆಸ್ಪತ್ರೆಗೆ ಸಾಗಿಸಲು 108 ಆಂಬ್ಯುಲೆನ್ಸ್ ಸೇವೆ ಸದಾ ಲಭ್ಯವಿರುತ್ತದೆ.

**ರೈತರ ಮಾನಸಿಕ ಒತ್ತಡ ನಿವಾರಣೆಗೆ ಉಚಿತ ಆಪ್ತಸಮಾಲೋಚನೆ:** ಬೆಳೆ ನಷ್ಟ ಮತ್ತು ಸಾಲದ ಸುಳಿಗೆ ಸಿಲುಕಿ ರೈತರು ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗುವುದನ್ನು ತಡೆಯಲು ಇಲಾಖೆ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. 'ಮನೋಚೈತನ್ಯ' ಯೋಜನೆಯಡಿ ತಾಲ್ಲೂಕು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಟ್ಟದಲ್ಲಿ ರೈತರಿಗಾಗಿ ಉಚಿತ ಮಾನಸಿಕ ಸಮಾಲೋಚನೆ ಶಿಬಿರಗಳನ್ನು ನಡೆಸಿ, ಮಾನಸಿಕ ತಜ್ಞರಿಂದ ಧೈರ್ಯ ತುಂಬುವ ಕೆಲಸ ಮಾಡಲಾಗುವುದು.

ಟೆಲಿ-ಮನಸ್ ಕಾರ್ಯಕ್ರಮದಡಿ ರೈತರು ತಮಗಾಗುವ ತೀವ್ರ ಮಾನಸಿಕ ಒತ್ತಡ ಅಥವಾ ಖಿನ್ನತೆಯ ಸಮಯದಲ್ಲಿ 14416 ಸಂಖ್ಯೆಗೆ ಕರೆ ಮಾಡಿ ದಿನದ 24 ಗಂಟೆಯೂ ಉಚಿತವಾಗಿ ತಜ್ಞರಿಂದ ಆಪ್ತಸಮಾಲೋಚನೆ ಮತ್ತು ಮಾರ್ಗದರ್ಶನ ಪಡೆಯಬಹುದು ಎಂದು ಅವರು ತಿಳಿಸಿದ್ದಾರೆ. ಗ್ರಾಮಕ್ಕೆ ಬರುವ ಆಶಾ ಕಾರ್ಯಕರ್ತೆಯರು ಅಥವಾ ಆರೋಗ್ಯ ಕ್ಷೇಮ ಕೇಂದ್ರದ ಸಿಬ್ಬಂದಿಯನ್ನು ಸಂಪರ್ಕಿಸಿ ಈ ಎಲ್ಲಾ ಸೌಲಭ್ಯಗಳನ್ನು ಉಚಿತವಾಗಿ ಪಡೆದುಕೊಳ್ಳಬಹುದು. ಯಾವುದೇ ಆರೋಗ್ಯ ನೆರವಿಗಾಗಿ ಇಲಾಖೆಯ ಸಹಾಯವಾಣಿ ಸಂಖ್ಯೆ 7353183474 ಗೆ ಕರೆ ಮಾಡಬಹುದು ಎಂದು ಡಿ.ಹೆಚ್.ಓ ಡಾ. ಯಲ್ಲಾ ರಮೇಶ್ ಬಾಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೋಷರಹಿತ ಮತದಾರರ ಪಟ್ಟಿ ತಯಾರಿಕೆಗೆ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಿ : ಸಿಇಓ



▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಪಾರದರ್ಶಕ ಮತದಾರರ ಪಟ್ಟಿ ಸಿದ್ಧಪಡಿಸುವ ನಿಟ್ಟಿನಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಈ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಜಿಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದ ಮುಂಭಾಗದಲ್ಲಿ ಶನಿವಾರ ವಿಶೇಷ 'ಎಸ್‌ಐಆರ್ ಮತದಾನ ಜಾಗೃತಿ ರಂಗೋಲಿ ಸ್ಪರ್ಧೆ' ಆಯೋಜಿಸಲಾಗಿತ್ತು.

ಮತದಾರರಲ್ಲಿ ಎಸ್‌ಐಆರ್ ಪ್ರಕ್ರಿಯೆಯ ಕುರಿತು ವ್ಯಾಪಕ ಜಾಗೃತಿ ಮೂಡಿಸುವ ಮಹತ್ತರ ಉದ್ದೇಶವನ್ನು ಈ ಕಾರ್ಯಕ್ರಮ ಹೊಂದಿತ್ತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಪ್ರತಿಯೊಂದು ಮತವೂ ಅಮೂಲ್ಯವಾಗಿದೆ. ದೋಷರಹಿತ ಮತದಾರರ ಪಟ್ಟಿ ರೂಪಿಸಲು ಪ್ರತಿಯೊಬ್ಬ ಅರ್ಹ ನಾಗರಿಕನೂ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು. ಈ ನಿಟ್ಟಿನಲ್ಲಿ ಅರಿವು ಮೂಡಿಸಲು ರಂಗೋಲಿ ಅತ್ಯುತ್ತಮ ಮಾಧ್ಯಮವಾಗಿದೆ ಎಂದು ತಿಳಿಸಿದರು. ಈ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಈ ತಿಂಗಳ ಜುಲೈ 29ರ ವರೆಗೆ ಬೂತ್ ಮಟ್ಟದ ಅಧಿಕಾರಿಗಳು ಪ್ರತಿ ಮನೆ ಮನೆಗೂ ಭೇಟಿ ನೀಡಿ ಗಣತಿ ನಮೂನೆಗಳನ್ನು ಮನೆ-ಮನೆಗೆ ನೀಡಲಿದ್ದಾರೆ. ಆ ಫಾರ್ಮ್‌ಗಳನ್ನು ಯಾವುದೇ ತಪ್ಪುಗಳಿಲ್ಲದಂತೆ ಜಾಗರೂಕತೆಯಿಂದ ಭರ್ತಿ ಮಾಡಿ ನೀಡಬೇಕು ಎಂದರು. ಪ್ರಜಾಪ್ರಭುತ್ವದ ಹಬ್ಬದಲ್ಲಿ ಪಾಲ್ಗೊಳ್ಳಲು ಪ್ರತಿಯೊಬ್ಬ ಅರ್ಹ ನಾಗರಿಕನೂ ಮತದಾರರ ಪಟ್ಟಿಯಲ್ಲಿ ಹೆಸರು ಹೊಂದಿರುವುದು ಕಡ್ಡಾಯ.

ಪುಟ-2

# ಹಿರಿಯ ಪತ್ರಕರ್ತ ಗಿರಿ ಯಾದವ್ ಅವರ 47ನೇ ಜನ್ಮದಿನಾಚರಣೆ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಕಳೆದ ಎರಡು ದಶಕಗಳಿಂದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಸಕ್ರಿಯ ಸೇವೆ ಸಲ್ಲಿಸುತ್ತಿರುವ ಹಿರಿಯ ಪತ್ರಕರ್ತ ಗಿರಿ ಯಾದವ್ ಅವರ 47ನೇ ಜನ್ಮದಿನವನ್ನು ಶುಕ್ರವಾರ ನಗರದ ಹಳೆಯ ಬಸ್ ನಿಲ್ದಾಣದ ಸಮೀಪದ ಅಂಬೇಡ್ಕರ್ ಸಂಕೀರ್ಣದಲ್ಲಿರುವ ಜೀ ಟಿವಿ–ಶ್ರೀಗಿರಿ ಎಂಟರ್‌ಪ್ರೈಸಸ್ ಕಚೇರಿಯಲ್ಲಿ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಕೇಕ್ ಕತ್ತರಿಸುವ ಮೂಲಕ ಜನ್ಮದಿನವನ್ನು ಆಚರಿಸಲಾಯಿತು. ನಂತರ ಪತ್ರಕರ್ತರು, ಜನಪ್ರತಿನಿಧಿಗಳು, ವಿವಿಧ ಸಂಘಟನೆಗಳ ಮುಖಂಡರು, ಸಾಮಾಜಿಕ ಕಾರ್ಯಕರ್ತರು, ಸ್ನೇಹಿತರು ಹಾಗೂ ಅಭಿಮಾನಿಗಳು ಗಿರಿ ಯಾದವ್ ಅವರಿಗೆ ಹೂಗುಚ್ಛ ನೀಡಿ ಜನ್ಮದಿನದ ಶುಭಾಶಯ ಕೋರಿದರು. ಉತ್ತಮ ಆರೋಗ್ಯ, ದೀರ್ಘಾಯುಷ್ಯ ಹಾಗೂ ಸಮಾಜಮುಖಿ ಸೇವೆಯಲ್ಲಿ ಇನ್ನಷ್ಟು ಸಾಧನೆ ಮಾಡುವಂತೆ ಹಾರೈಸಿದರು.

ಗಿರಿ ಯಾದವ್ ಅವರು ಕಳೆದ 20 ವರ್ಷಗಳಿಂದ ಕನ್ನಡ ಹಾಗೂ ತೆಲುಗು ದಿನಪತ್ರಿಕೆಗಳು ಮತ್ತು ವಿವಿಧ ಎಲೆಕ್ಟ್ರಾನಿಕ್ ಮಾಧ್ಯಮಗಳಲ್ಲಿ ಪತ್ರಕರ್ತರಾಗಿ



ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕ ಸಮಸ್ಯೆಗಳನ್ನು ನಿರ್ಭಯವಾಗಿ ಬೆಳಕಿಗೆ ತಂದು ಜನಪರ ಪತ್ರಿಕೋದ್ಯಮದ ಮೂಲಕ ವಿಶೇಷ ಗುರುತನ್ನು ಪಡೆದಿದ್ದಾರೆ.

ಪತ್ರಿಕೋದ್ಯಮದ ಜೊತೆಗೆ ಸಮಾಜಸೇವೆಯಲ್ಲೂ ತೊಡಗಿಸಿಕೊಂಡಿರುವ ಅವರು, ಜನ ಚೈತನ್ಯ ಚಾರಿಟೇಬಲ್ ಟ್ರಸ್ಟ್ ಮೂಲಕ ಬೇಸಿಗೆ ಸಂದರ್ಭದಲ್ಲಿ ಸಾರ್ವಜನಿಕರಿಗೆ ತಂಪು ನೀರಿನ ವಿತರಣೆ, ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ವಿತರಣೆ, ರಕ್ತದಾನ ಶಿಬಿರ, ಉಚಿತ ಆರೋಗ್ಯ ತಪಾಸಣಾ ಶಿಬಿರ, ಗಿಡ ನೆಡುವ ಕಾರ್ಯಕ್ರಮ ಸೇರಿದಂತೆ ಅನೇಕ ಸಮಾಜಮುಖಿ ಹಾಗೂ ಜನಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸುತ್ತಿದ್ದಾರೆ.

ಅಲ್ಲದೆ, ಬಳ್ಳಾರಿ ಜಿಲ್ಲಾ ಗೊಲ್ಲ ಯಾದವ ಸಂಘದ ನಿರ್ದೇಶಕರಾಗಿ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಎರಡು ಅವಧಿಗೆ ಸೇವೆ ಸಲ್ಲಿಸಿರುವ ಅವರು, ಪ್ರಸ್ತುತ ರಾಷ್ಟ್ರೀಯ ಬಿ.ಸಿ. ಚೈತನ್ಯ ಸಮಿತಿಯ ರಾಷ್ಟ್ರೀಯ ಉಪಾಧ್ಯಕ್ಷರಾಗಿ ಸಾಮಾಜಿಕ ನ್ಯಾಯ, ಹಿಂದುಳಿದ ವರ್ಗಗಳ ಹಕ್ಕುಗಳ ರಕ್ಷಣೆ ಹಾಗೂ ಸಾರ್ವಜನಿಕ ಸೇವಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಗಿರಿ ಯಾದವ್ ಅವರು ಪತ್ರಿಕೋದ್ಯಮದಲ್ಲಿ ವೃತ್ತಿಪರ ನಿಷ್ಠೆ ಹಾಗೂ ಸಮಾಜಸೇವೆಯಲ್ಲಿ ಬದ್ಧತೆಯಿಂದ ಕಾರ್ಯನಿರ್ವಹಿಸುತ್ತಿದ್ದು, ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಜನಪರ ಸೇವೆಯನ್ನು ಮುಂದುವರಿಸಿ ಇನ್ನಷ್ಟು ಯಶಸ್ಸು ಗಳಿಸಿ ಸಾರ್ವಜನಿಕರ ವಿಶ್ವಾಸಕ್ಕೆ ಪಾತ್ರರಾಗಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಗಣ್ಯರು, ಪತ್ರಕರ್ತರು, ಸಾಮಾಜಿಕ ಸಂಘಟನೆಗಳ ಪದಾಧಿಕಾರಿಗಳು, ಸ್ನೇಹಿತರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದು, ಗಿರಿ ಯಾದವ್ ಅವರಿಗೆ ಜನ್ಮದಿನದ ಶುಭಾಶಯಗಳನ್ನು ತಿಳಿಸಿದರು.

# ಸೋಮಲಾಪುರದಲ್ಲಿ ಪ್ರಶಸ್ತಿ ವಿಜೇತ ಕಲಾವಿದೆಗೆ ಮತದಾರರ ಪರಿಷ್ಕರಣೆ ಅರ್ಜಿ ವಿತರಣೆ

■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ತಾಲ್ಲೂಕಿನಲ್ಲಿ ಈಗಾಗಲೇ ಆರಂಭವಾಗಿರುವ ಮತದರಾರ ವಿಶೇಷ ಸಮಗ್ರ ಪರಿಷ್ಕರಣೆ ಅಭಿಯಾನ ಭರದಿಂದ ಸಾಗಿದ್ದು, ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಾಗೂ ಪಟ್ಟಣದಲ್ಲಿ ಗಣ್ಯರು, ರಾಜಕೀಯ ಪ್ರತಿನಿಧಿಗಳು ಹಾಗೂ ವಿಶೇಷವಾಗಿ ಪ್ರಶಸ್ತಿ ಪುರಸ್ಕೃತ ಕಲಾವಿದರಿಗೆ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆಯ ಎನ್ಯುಮರೇಷನ್ ಅರ್ಜಿಗಳನ್ನು ವಿತರಿಸಿ ಮತದಾರರ ಪರಿಷ್ಕರಣೆ ಜಾಗೃತಿ ಮೂಡಿಸಿದರು.

ತಾಲ್ಲೂಕಿನ ದೇವಲಾಪುರ ಗ್ರಾ.ಪಂ ವ್ಯಾಪ್ತಿಯ ಸೋಮಲಾಪುರ ಗ್ರಾಮದಲ್ಲಿ ವಾಸವಿರುವ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಬುರ್ರಕಥಾ ಕಲಾವಿದೆ ಅಶ್ವಪೆದ್ದ ರಾಮಕ್ಕ ಅವರ ಮನೆಗೆ ಗ್ರಾಮ ಪಂಚಾಯತಿ ಅಧಿಕಾರಿಗಳು ಸಿಬ್ಬಂದಿಗಳು ಭೇಟಿ ನೀಡಿ ಕಲಾವಿದೆಯನ್ನು ಆತ್ಮೀಯವಾಗಿ ಸನ್ಮಾನಿಸಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಅಭಿಯಾನ ಕುರಿತು ಮಾಹಿತಿ ನೀಡಿ ತಮ್ಮ ಗ್ರಾಮದಲ್ಲಿ ಮತದಾರರ ಪರಿಷ್ಕರಣೆ ಬಗ್ಗೆ ಸಾರ್ವಜನಿಕರಲ್ಲಿ



ಅರಿವು ಮೂಡಿಸುವಂತೆ ಮನವಿ ಮಾಡಿದರು. ದೇವಲಾಪುರ ಗ್ರಾ.ಪಂ.ಪಿಡಿಒ ಮಲ್ಲಿಕಾರ್ಜುನ ಮಾತನಾಡಿ ಮತದಾರರು ಸುಳ್ಳು ಸುದ್ದಿಗಳಿಗೆ ಕಿವಿಗೊಡದೆ ಈಗಾಗಲೇ ತಾವು ಮತದಾನ ಮಾಡಿದ ದಾಖಲೆಗಳನ್ನು ಸಲ್ಲಿಸಿ ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಿಕೊಳ್ಳಬೇಕು. ಒಂದು ತಿಂಗಳ ಕಾಲ ಈ ಅಭಿಯಾನ ನಡೆಯಲಿದ್ದು, ನಂತರ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಅದರಲ್ಲಿ ತಪ್ಪುಗಳಿದ್ದರೆ ಅಕ್ಷೇಪರಣೆಗಳನ್ನು ಸಲ್ಲಿಸಬಹುದಾಗಿದೆ ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತಿ ಸಿಬ್ಬಂದಿಗಳು ಗ್ರಾಮ ಪಂಚಾಯತಿ ಸಿಬ್ಬಂದಿಗಳು ಇದ್ದರು.

# ಸಮತೋಲಿತ ಮತ್ತು ಪೌಷ್ಟಿಕ ಆಹಾರದ ಸೇವನೆ ಏಕೈಕ ಮಾರ್ಗವಾಗಿದೆ : ವಸಂತ್



■ ಗಣಿನಾಡವಾಣಿ ವಾರ್ತೆ,ಸಿರುಗುಪ್ಪ

ದೇಹಕ್ಕೆ ಅಗತ್ಯವಿರುವ ಎಲ್ಲಾ ಪೋಷಕಾಂಶಗಳು ಸರಿಯಾದ ಪ್ರಮಾಣದಲ್ಲಿ ಸಿಗದೇ ಇದ್ದಾಗ ಅಪೌಷ್ಟಿಕತೆ. ಎದುರಾಗುತ್ತದೆ. ಇದನ್ನು ತಡೆಗಟ್ಟಲು ಮತ್ತು ನಿರ್ಮೂಲನೆ ಮಾಡಲು ಸಮತೋಲಿತ ಮತ್ತು ಪೌಷ್ಟಿಕ ಆಹಾರದ ಸೇವನೆ ಏಕೈಕ ಮಾರ್ಗವಾಗಿದೆ ಎಂದು ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ಯೋಜನಾಧಿಕಾರಿ ಎಸ್.ವಸಂತ ಹೇಳಿದರು.

ನಗರದಲ್ಲಿ ಸರ್ಕಾರಿ ಹಿರಿಯ ಪ್ರಾರ್ಥಮಿಕ ಶಾಲೆಯಲ್ಲಿ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ "ಜ್ಞಾನದೀಪ" ಜ್ಞಾನವಿಕಾಸ ಕೇಂದ್ರದ ಸದಸ್ಯರಿಗೆ ಶನಿವಾರ ಆಯೋಜಿಸಿದ್ದ ಪೌಷ್ಟಿಕಆಹಾರಕಾರ್ಯಕ್ರಮದಲ್ಲಿ ಮಾತನಾಡಿದರು.

ಇಂದಿನ ಆಧುನಿಕ ಹಾಗೂ ಜಂಜಾಟದ ಜೀವನಶೈಲಿಯಲ್ಲಿ ಮನುಷ್ಯನಿಗೆ ಎಲ್ಲದಕ್ಕಿಂತ ಹೆಚ್ಚಾಗಿ ಬೇಕಾಗಿರುವುದು ಉತ್ತಮ ಆರೋಗ್ಯ. ಆದರೆ, ಇತ್ತೀಚಿನ ದಿನಗಳಲ್ಲಿ ಬದಲಾಗುತ್ತಿರುವ ಆಹಾರ ಪದ್ಧತಿ ಮತ್ತು ಜಂಕ್ ಫುಡ್‌ಗಳ ವ್ಯಾಮೋಹದಿಂದಾಗಿ ಜನರ ಆರೋಗ್ಯ ದಿನ ದಿನಕ್ಕೆ ಕ್ಷೀಣಿಸುತ್ತಿದೆ. ಈ ಹಿನ್ನೆಲೆಯಲ್ಲಿ, ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಆರೋಗ್ಯ ತಜ್ಞರು ಎಚ್ಚರಿಸಿದ್ದಾರೆ.

ಪೌಷ್ಟಿಕ ಆಹಾರದ ಸೇವನೆಯಿಂದ ದೇಹಕ್ಕೆ ದೊರೆಯುವ ಲಾಭಗಳ ಬಗ್ಗೆ ಮಾಹಿತಿ ನೀಡಿದರು.

ಆರೋಗ್ಯ ಇಲಾಖೆಯ ನರ್ಸ್ ಸರೋಜಾ ಮಾತನಾಡಿ ಪೌಷ್ಟಿಕ ಆಹಾರ ಸಿರಿಧಾನ್ಯದ ಕುರಿತು ಈ ಕಾಲಮಾನದಲ್ಲಿ ಬಳಸುವ ಆಹಾರ ಪದ್ಧತಿ, ಆರೋಗ್ಯ ಮೇಲೆ ಆಗುವ ದುಷ್ಪರಿಣಾಮಗಳ ಹಾಗೂ ಸಿರಿಧಾನ್ಯ ಬಳಕೆ ಮಾಡುವುದರಿಂದ ಬಿಪಿ, ಶುಗರ್, ರಕ್ತ ಹೀನತೆ, ಮಾನಸಿಕ ಒತ್ತಡ, ಗರ್ಭಿಣಿಯರ ಆರೈಕೆ, ಮಕ್ಕಳ ಆರೈಕೆ, ಹೀಗೆ ಅನೇಕ ಪ್ರಯೋಜನಗಳ ಕುರಿತು ಮಾಹಿತಿಯನ್ನು ನೀಡಿದರು.

ಶಾಲಾ ಮುಖ್ಯಗುರು ಅಯ್ಯಪ್ಪ, ಜ್ಞಾನವಿಕಾಸ ಸಮನ್ವಯಾಧಿಕಾರಿ ಪ್ರಿಯಾ, ಮೇಲ್ವಿಚಾರಕಿ ಚಂದ್ರಕಲಾ, ಸೇವಾಪ್ರತಿನಿಧಿ ಶಾಹಿದಾ, ಲಕ್ಷ್ಮಿ ಕೇಂದ್ರದ ಸದಸ್ಯರು ಇದ್ದರು.

# ಶ್ರೀ ಗಾನಯೋಗಿ ಪಂಚಾಕ್ಷರಿ ಗವಾಯಿಗಳ 82ನೇ ಪುಣ್ಯಸ್ಮರಣೋತ್ಸವ ಅರ್ಥಪೂರ್ಣ ಆಚರಣೆ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ



ನಗರದ ಗಾಂಧಿನಗರದ ಬಾಲಭಾರತಿ ಶಾಲೆಯಲ್ಲಿ ಶ್ರೀ ಪಂಚಾಕ್ಷರಿ ಮಾರ್ಷಿಯಲ್ ಆರ್ಟ್ಸ್ ಟ್ರಸ್ಟ್ (ರಿ) ವತಿಯಿಂದ ಭಾನುವಾರ ಶ್ರೀ ಗಾನಯೋಗಿ ಪಂಚಾಕ್ಷರಿ ಗವಾಯಿಗಳ 82ನೇ ಪುಣ್ಯಸ್ಮರಣೋತ್ಸವವನ್ನು ಶ್ರದ್ಧಾಭಕ್ತಿಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸ ಲಾಯಿತು.

ಕಾರ್ಯಕ್ರಮವನ್ನು ಕರಾಟೆ ತರಬೇತಿ ಪಡೆಯುತ್ತಿರುವ ಮಕ್ಕಳು ಶ್ರೀ ಗಾನಯೋಗಿ ಪಂಚಾಕ್ಷರಿ ಗವಾಯಿಗಳ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಪೂಜೆ ನೆರವೇರಿಸುವ ಮೂಲಕ ಉದ್ಘಾಟಿಸಿದರು. ಬಳಿಕ ಪೂಜ್ಯರ ಜೀವನ ಸಾಧನೆ ಹಾಗೂ ಸಮಾಜಮುಖಿ ಕಾರ್ಯಗಳನ್ನು ಸ್ಮರಿಸಿ ಗೌರವ ನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಟ್ರಸ್ಟ್ ಅಧ್ಯಕ್ಷ ಬಂಡ್ರಾಳ್ ಎಂ. ಮೃತ್ಯುಂಜಯಸ್ವಾಮಿ ಮಾತನಾಡಿ, ಶ್ರೀ ಗಾನಯೋಗಿ ಪಂಚಾಕ್ಷರಿ ಗವಾಯಿಗಳು ಯುಗಪುರುಷ ಹಾನಗಲ್ಲ ಕುಮಾರಸ್ವಾಮಿಗಳ ಕೃಪಾಶೀರ್ವಾದದಿಂದ ಸಂಗೀತ ಕ್ಷೇತ್ರದಲ್ಲಿ ಅಪೂರ್ವ ಸಾಧನೆ ಮಾಡಿ, ಗದುಗಿನ ವೀರೇಶ್ವರ ಪುಣ್ಯಾಶ್ರಮದ ಮೂಲಕ ಸಾವಿರಾರು ಅಂಧ, ಅನಾಥ ಹಾಗೂ ನಿರ್ಗತಿಕರ ಬದುಕಿಗೆ ಸಂಗೀತ ಶಿಕ್ಷಣದ ಮೂಲಕ ಹೊಸ ಬೆಳಕನ್ನು ನೀಡಿದ ಮಹಾನ್ ಸಂತರು ಎಂದು ಹೇಳಿದರು.

ಅವರು ಶ್ರೀ ಪುಟ್ಟರಾಜ ಕವಿ ಗವಾಯಿಗಳಂತಹ ಶ್ರೇಷ್ಠ ಶಿಷ್ಯರನ್ನು ನಾಡಿಗೆ ನೀಡಿದ ಮಹಾನ್ ಗುರುಗಳಾಗಿದ್ದು, ಅವರ ಪರೋಪಕಾರ, ಮಾನವೀಯತೆ ಮತ್ತು ಸೇವಾ ಮನೋಭಾವ ಇಂದಿಗೂ ಸಮಾಜಕ್ಕೆ ಆದರ್ಶವಾಗಿದೆ. ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಪುಣ್ಯಸ್ಮರಣೆಯ ಅಂಗವಾಗಿ ಬಳ್ಳಾರಿ ನಗರದ ಸಮರ್ಥನ ಅಂಗವಿಕಲರ ಸಂಸ್ಥೆಯ ಅಂಧ ಹಾಗೂ ಅಂಗವಿಕಲ ಮಕ್ಕಳಿಗೆ ಹಣ್ಣುಗಳನ್ನು ವಿತರಿಸಿ, ಅವರೊಂದಿಗೆ ಸಮಯ ಕಳೆಯುವ ಮೂಲಕ ಮಾನವೀಯ ಸೇವೆಯನ್ನು ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ರೈಲ್ವೆ ಕ್ರಿಯಾ ಸಮಿತಿಯ ಹೋರಾಟಗಾರ ಮಹೇಶ್ವರಸ್ವಾಮಿ, ರೈತ ಮುಖಂಡರಾದ ಗಂಗಾವತಿ ವೀರೇಶ್, ಜಾಲಿಹಾಳ ಶ್ರೀಧರಗೌಡ, ಹೆಚ್.ಎಂ. ಅಮರೇಶ್, ಚೈತನ್ಯ ಷಡಾಕ್ಷರಿ ಸೇರಿದಂತೆ ಹಲವು ಗಣ್ಯರು ಹಾಗೂ ಟ್ರಸ್ಟ್‌ನ ಪದಾಧಿಕಾರಿಗಳು, ಕರಾಟೆ ವಿದ್ಯಾರ್ಥಿಗಳು, ಪೋಷಕರು ಮತ್ತು ಸಾರ್ವಜನಿಕರು ಭಾಗವಹಿಸಿ ಶ್ರೀ ಗಾನಯೋಗಿ ಪಂಚಾಕ್ಷರಿ ಗವಾಯಿಗಳಿಗೆ ಭಕ್ತಿಪೂರ್ವಕ ನಮನ ಸಲ್ಲಿಸಿದರು.

# ಮಹಿಳಾ ಒಕ್ಕೂಟದಿಂದ ಎಸ್.ಐ.ಆರ್. ಜಾಗೃತಿ ಕಾರ್ಯಕ್ರಮ

■ ಗಣಿನಾಡವಾಣಿ ವಾರ್ತೆ, ಸಿರುಗುಪ್ಪ

ಮತದಾರರ ಪಟ್ಟಿಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕರ ಹೆಸರು ಸೇರ್ಪಡೆಯಾಗುವಂತೆ ಹಾಗೂ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್.ಐ.ಆರ್.) ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ತಾಲ್ಲೂಕಿನ ಹಚ್ಚೊಳ್ಳಿ ಗ್ರಾಮದಲ್ಲಿ ಶನಿವಾರ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್ ಹಾಗೂ ಸ್ಪಂದನ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಸ್.ಐ.ಆರ್. ಅಭಿಯಾನದ ಉದ್ದೇಶ, ಮತದಾರರ ಪಟ್ಟಿಗೆ ಹೊಸದಾಗಿ ಹೆಸರು ಸೇರಿಸುವುದು, ಈಗಾಗಲೇ ಇರುವ ಮಾಹಿತಿಯಲ್ಲಿ ತಿದ್ದುಪಡಿ ಮಾಡಿಸಿಕೊಳ್ಳುವುದು, ಸ್ಥಳಾಂತರಗೊಂಡ ಮತದಾರರ ವಿವರಗಳನ್ನು ನವೀಕರಿಸುವುದು ಸೇರಿದಂತೆ ವಿವಿಧ ವಿಷಯಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು.ಈ ಸಂದರ್ಭದಲ್ಲಿ ಒಕ್ಕೂಟದ ಪದಾಧಿಕಾರಿಗಳು, ಸ್ವಸಹಾಯ ಸಂಘಗಳ ಸದಸ್ಯರು ಹಾಗೂ ಗ್ರಾಮಸ್ಥರಿಗೆ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ತಮ್ಮ ಗ್ರಾಮದಲ್ಲಿರುವ ಪ್ರತಿಯೊಬ್ಬ ಅರ್ಹ ಮತದಾರರಿಗೂ ಈ ಕುರಿತು ಮಾಹಿತಿ ತಲುಪಿಸುವಂತೆ ಕರೆ ನೀಡಲಾಯಿತು. ಮನೆ ಮನೆಗೆ ಭೇಟಿ ನೀಡಿ ಎಸ್.ಐ.ಆರ್. ಕುರಿತು ಜಾಗೃತಿ ಮೂಡಿಸುವ ಅಗತ್ಯವಿದ್ದು, ನಿಗದಿತ ಅವಧಿಯೊಳಗೆ ಅಗತ್ಯ ದಾಖಲೆಗಳೊಂದಿಗೆ ಪರಿಷ್ಕರಣೆ ಪ್ರಕ್ರಿಯೆ ಪೂರ್ಣಗೊಳಿಸಿಕೊಳ್ಳುವಂತೆ ಮನವಿ ಮಾಡಲಾಯಿತು.ಕಾರ್ಯಕ್ರಮದಲ್ಲಿ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟದ ಎಲ್ಲಾ ಪದಾಧಿಕಾರಿಗಳು, ವಿವಿಧ ಸ್ವಸಹಾಯ ಸಂಘಗಳ ಸದಸ್ಯರು ಹಾಗೂ ಗ್ರಾಮ ಪಂಚಾಯಿತಿ ಪ್ರತಿನಿಧಿಗಳು ಭಾಗವಹಿಸಿ, ಎಸ್.ಐ.ಆರ್. ಅಭಿಯಾನವನ್ನು ಯಶಸ್ವಿಗೊಳಿಸಲು ಕೈಜೋಡಿಸುವ ಸಂಕಲ್ಪ ವ್ಯಕ್ತಪಡಿಸಿದರು.



## ಇಂದು ವಿದ್ಯುತ್ ವ್ಯತ್ಯಯ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಯ 110/11ಕೆ.ವಿ ಬಿಸಿಲಹಳ್ಳಿ ವಿದ್ಯುತ್ ಉಪ–ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎಫ್–63 ನಲ್ಲಿ ಲಿಂಕ್–ಲೈನ್ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಜುಲೈ 06 ರಂದು ಬೆಳಿಗ್ಗೆ 09 ರಿಂದ ಸಂಜೆ 06 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಎಫ್–63 ವ್ಯಾಪ್ತಿಯ ರೂಪನಗುಡಿ, ಗ್ರಾಂಡ್ ಫಂಕ್ಷನ್ ಹಾಲ್, ವೆಂಕಟರಮಣ ನಗರ, ನಬೀ ಕಾಲೋನಿ, ಅಂಜಿನಪ್ಪ ನಗರ, ಶ್ರೀರಾಂಪುರ ಕಾಲೋನಿ, ಗೋನಾಳ್, ವರಬಸಪ್ಪ ಗುಡಿ ಹಾಗೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಹಾಗೂ ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 220/11 ಕೆವಿ ಅಲ್ಲಿಪುರ ವಿದ್ಯುತ್ ವಿತರಣಾ ಕೇಂದ್ರದ ಬ್ಯಾಂಕ್–2 ನಿಂದ ವಿದ್ಯುತ್ ಸರಬರಾಜು ಆಗುವ ಎಫ್–34ರ ಲಿಂಕ್ ಲೈನ್ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಜುಲೈ 06 ರಂದು ಬೆಳಿಗ್ಗ 10 ರಿಂದ ಸಂಜೆ 05 ಗಂಟೆಯವರೆಗೆ ನಗರದ ಮೊದಲ ರೈಲ್ವೆ ಗೇಟ್, ಕೊರಚ ಸ್ಟ್ರೀಟ್, ಉರ್ದು ಟ್ರೈನಿಂಗ್ ಸ್ಕೂಲ್, ಕಡಪಗೇರಿ, ಟೈಲರ್ ಸ್ಟ್ರೀಟ್, ವಡ್ಡೆ ನಾಗಪ್ಪ ಕಾಲೋನಿ, ತಿಲಕ್ ನಗರ, ವಿನಾಯಕ ನಗರ, ಐಶ್ವರ್ಯ ಕಾಲೋನಿ, ಐಟಿಐ ಕಾಲೇಜು, ರೇಡಿಯೋ ಪಾರ್ಕ್, ಕೌಲ್ ಬಜಾರ್ ಮುಖ್ಯ ರಸ್ತೆ ಸೇರಿದಂತೆ ಇತರೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಮೃತ ಅನಾಮಧೇಯ ವೃದ್ಧನ ವಾರಸುದಾರರ ಪತ್ತೆಗೆ ಮನವಿ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಕುರುಗೋಡು ಪೊಲೀಸ್ ಠಾಣೆ ವ್ಯಾಪ್ತಿಯ ಭಾಗ್ಯನಗರ ಕ್ಯಾಂಪ್ ನಿಂದ ಸುಮಾರು 1 ಕಿ.ಮೀ ದೂರದ ಹಳ್ಳದ ಹತ್ತಿರ ಅಂದಾಜು 60 ರಿಂದ 65 ವರ್ಷ ವಯಸ್ಸಿನ ಅನಾಮಧೇಯ ವೃದ್ಧ ಸುಮಾರು 10 ದಿನಗಳ ಹಿಂದೆ ಮೃತಪಟ್ಟಂತೆ ಕಂಡುಬಂದಿದ್ದು, ಮೃತನ ಹೆಸರು ಮತ್ತು ವಿಳಾಸದ ವಿವರಗಳ ಮಾಹಿತಿ ಇರುವುದಿಲ್ಲ. ಈ ಕುರಿತು ಪ್ರಕರಣ ದಾಖಲಾಗಿದ್ದು, ವಾರಸುದಾರರ ಪತ್ತೆಗೆ ಸಹಕರಿಸಬೇಕು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

**ಚಹರೆ ವಿವರ:** ಎತ್ತರ ಅಂದಾಜು 5.6 ಅಡಿ, ಬೂದು ಬಣ್ಣದ ಟೀ–ಶರ್ಟ್ ಮತ್ತು ಕಪ್ಪು ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾನೆ.

ಮೃತನ ವಾರಸುದಾರರ ಬಗ್ಗೆ ಯಾವುದೇ ಮಾಹಿತಿ ದೊರೆತಲ್ಲಿ ಸಾರ್ವಜನಿಕರು ಕುರುಗೋಡು ಪೊಲೀಸ್ ಠಾಣೆಯ ದೂ.08392–263433, ಮೊ.9480803051 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಮೃತ ಅನಾಮಧೇಯ ವೃದ್ಧನ ವಾರಸುದಾರರ ಪತ್ತೆಗೆ ಮನವಿ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ನಗರದ ಗಡಿಗಿ ಚೆನ್ನಪ್ಪ ವೃತ್ತದ ಹತ್ತಿರದ ಹಳೆಯ ಬಸ್ ನಿಲ್ದಾಣದ ಕೆನರಾ ಬ್ಯಾಂಕ್ ಮುಂಭಾಗದ ಫುಟ್ ಪಾತ್ ನಲ್ಲಿ ಅಂದಾಜು 70 ರಿಂದ 72 ವರ್ಷ ವಯಸ್ಸಿನ ಅನಾಮಧೇಯ ವೃದ್ಧನು ಯಾವುದೋ ಖಾಯಿಲೆಯಿಂದ ಅಸ್ವಸ್ಥನಾದಂತೆ ಕಂಡುಬಂದಿದ್ದ ಕಾರಣ, ಸಾರ್ವಜನಿಕರು ಆಸ್ಪತ್ರೆಗೆ ಚಿಕಿತ್ಸೆಗೆ ಎಂದು ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾಗದೇ ಜು. 02 ರಂದು ಮೃತಪಟ್ಟಿದ್ದು, ಮೃತನ ಹೆಸರು ಮತ್ತು ವಿಳಾಸದ ವಿವರಗಳ ಮಾಹಿತಿ ಇಲ್ಲದಿರುವುದಿಲ್ಲ. ವಾರಸುದಾರರ ಪತ್ತೆಗಾಗಿ ಬಳ್ಳಾರಿಯ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಪೊಲೀಸರು ಮನವಿ ಮಾಡಿದ್ದಾರೆ.

**ಚಹರೆ ವಿವರ:** ಎತ್ತರ ಅಂದಾಜು 5.5 ಅಡಿ, ತೆಳುವಾದ ಮೈಕಟ್ಟು, ಕೋಲು ಮುಖ, ತಲೆಯಲ್ಲಿ ಕಪ್ಪು– ಬಿಳಿ ಕೂದಲು ಹೊಂದಿದ್ದು, ಮುಖದಲ್ಲಿ ಬಿಳಿ ಗಡ್ಡ ಮತ್ತು ಮೀಸೆ ಬಿಟ್ಟಿರುತ್ತಾನೆ.

ಮೃತನ ವಾರಸುದಾರರ ಬಗ್ಗೆ ಯಾವುದೇ ಮಾಹಿತಿ ದೊರೆತಲ್ಲಿ ಸಾರ್ವಜನಿಕರು ಬಳ್ಳಾರಿಯ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ದೂ.08392–272022, ಪಿಎಸ್‌ಐ ಮೊ.9480803081 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

## ದೋಷರಹಿತ ಮತದಾರರ ಪಟ್ಟಿ ತಯಾರಿಕೆಗೆ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಿ : ಸಿಇಒ



■ ಮೊದಲ ಪುಟದಿಂದ

ಹಾಗಾಗಿ ಈ ಮಹತ್ವದ ಪ್ರಕ್ರಿಯೆಯ ಕುರಿತು ಸಮಾಜದ ಪ್ರತಿಯೊಬ್ಬರಿಗೂ ಅರಿವು ಮೂಡಿಸುವುದು ಇಂದಿನ ಅಗತ್ಯವಾಗಿದೆ ಎಂದರು. ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಮಹಿಳೆಯರು ತಾವು ಬಿಡಿಸಿದ ಆಕರ್ಷಕ ರಂಗೋಲಿಗಳ ಭಾವಚಿತ್ರಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ತಮ್ಮ ಮೊಬೈಲ್ ಸ್ಟೇಟಸ್‌ಗಳಲ್ಲಿ ಹಂಚಿಕೊಳ್ಳಬೇಕು. ಈ ಮೂಲಕ ಸಾರ್ವಜನಿಕರಲ್ಲಿ ಮತದಾನ ಮತ್ತು ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಇನ್ನಷ್ಟು ಹೆಚ್ಚಿನ ಜಾಗೃತಿ ಮೂಡಿಸಲು ಸಾಧ್ಯವಾಗುತ್ತದೆ ಎಂದು ಅಧಿಕಾರಿಗಳು ಸಲಹೆ ನೀಡಿದರು.ಮುಂದಿನ ದಿನಗಳಲ್ಲಿ ಇದೇ ಮಾದರಿಯ ಎಸ್‌ಐಆರ್ ಜಾಗೃತಿ ರಂಗೋಲಿ ಸ್ಪರ್ಧೆಗಳನ್ನು ಗ್ರಾಮ ಪಂಚಾಯತ್ ಮಟ್ಟದಲ್ಲೂ ಸಹ ಆಯೋಜಿಸಲು ಉದ್ದೇಶಿಸಲಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

**ರಂಗೋಲಿಯಲ್ಲಿ ಮೂಡಿದ ಎಸ್‌ಐಆರ್ ಜಾಗೃತಿ ಸಂದೇಶ:** ಸ್ಪರ್ಧೆಯಲ್ಲಿ ಸ್ವ–ಸಹಾಯ ಗುಂಪಿನ ಮಹಿಳೆಯರು ಉತ್ಸಾಹದಿಂದ ಭಾಗವಹಿಸಿದ್ದರು. ಸ್ಪರ್ಧಾಳುಗಳು ತಮ್ಮ ಕಲ್ಪನಾ ಶಕ್ತಿಯ ಮೂಲಕ ಆಕರ್ಷಕ ರಂಗೋಲಿಗಳನ್ನು ಬಿಡಿಸಿ ಗಮನ ಸೆಳೆದರು. ಎಸ್‌ಐಆರ್ ಕುರಿತ ಜಾಗೃತಿ ಸಂದೇಶಗಳು ಮತ್ತು ಲೋಗೋಗಳು ರಂಗೋಲಿ ಬಣ್ಣಗಳ ಮೂಲಕ ನೆಲದ ಮೇಲೆ ಮೂಡಿಬಂದವು. ನ ೦ ತ ' ರ ' ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಜಿಲ್ಲಾಡಳಿತದ ವತಿಯಿಂದ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನಗಳನ್ನು ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಜಿಪಂ ಸಹಾಯಕ ನಿರ್ದೇಶಕ ಬಸವರಾಜ ಹಿರೇಮಠ ಸೇರಿದಂತೆ ಎನ್‌ಎಲ್‌ಆರ್‌ಎಂ ಯೋಜನೆಯ ಅಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ಸ್ವಸಹಾಯ ಸಂಘಗಳ ಗುಂಪಿನ ಮಹಿಳಾ ಸದಸ್ಯರು ಸೇರಿದಂತೆ ನೂರಕ್ಕೂ ಹೆಚ್ಚು ಮಹಿಳೆಯರು ಅತ್ಯಂತ ಉತ್ಸಾಹದಿಂದ ಭಾಗವಹಿಸಿದ್ದರು. ತಾವು ಬಿಡಿಸಿದ ಆಕರ್ಷಕ ರಂಗೋಲಿಗಳ ಮುಂದೆ ನಿಂತು ಸೆಲ್ಫಿ ತೆಗೆದುಕೊಳ್ಳುವ ಮೂಲಕ ಜಾಗೃತಿ ಅಭಿಯಾನಕ್ಕೆ ಸಾಕ್ಷಿಯಾದರು.

# ಜೆಸ್ಕಾಂ ಕಚೇರಿ ಕಟ್ಟಡ ಕಾಮಗಾರಿ ಆರಂಭ



■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ಪಟ್ಟಣದ ಜೆಸ್ಕಾಂ ಉಪವಿಭಾಗ ಎಇಇ ನೂತನ ಕಚೇರಿ ಅರಂಭಕ್ಕೆ ಅರಣ್ಯ ಇಲಾಖೆಯ ನಿಧಾನಗತಿಯಿಂದಾಗಿ ಕಟ್ಟಡ ನಿರ್ಮಾಣಕ್ಕೆ ಅಡಚಣೆಯಾಗಿತ್ತು. ಆದರೆ, ಇದೀಗ ಅರಣ್ಯ ಇಲಾಖೆ ಕಚೇರಿ ಕಟ್ಟಡ ನಿರ್ಮಾಣದ ಸ್ಥಳದಲ್ಲಿದ್ದ 10ಕ್ಕೂ ಅಧಿಕ ಗಿಡ ಮರಗಳನ್ನು ತೆರವುಗೊಳಿಸಲು ಅನುಮತಿ ನೀಡಿದ್ದು, ಹಾಗೂ ಅಲ್ಲಿನ ಗಿಡಮರಗಳನ್ನು ತೆರವುಗೊಳಿಸಿದ್ದರಿಂದ ಕಚೇರಿ ಕಟ್ಟಡ ನಿರ್ಮಾಣಕ್ಕಿದ್ದ ಗ್ರಹಣ ಬಿಟ್ಟಿದ್ದು, ಕಚೇರಿ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಇಂದಿನಿಂದ ಆರಂಭಗೊಂಡಿದೆ.

ದೇವರ ಕೊಟ್ಟರೂ ಪೂಜಾರಿ ವರ ಕೊಡಲಿಲ್ಲ ಎನ್ನುವಂತೆ ಕಂಪ್ಲಿ ಕ್ಷೇತ್ರದ ಶಾಸಕರು ತಾಲ್ಲೂಕು ಕೇಂದ್ರದಲ್ಲಿ ಜೆಸ್ಕಾಂ ಇಲಾಖೆಯ ತಾಲ್ಲೂಕು ಮಟ್ಟದ ಕಚೇರಿ ಆರಂಭಕ್ಕೆ ಅನುದಾನ ಮಂಜೂರು ಮಾಡಿಸಿ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆಯನ್ನು ನೆರವೇರಿಸಿ ತಿಂಗಳುಗಳೇ ಅಗಿದ್ದರು ಸಹಿತ ಸ್ಥಳದಲ್ಲಿದ್ದ ಗಿಡಮರಗಳನ್ನು ತೆರವುಗೊಳಿಸುವ ವಿಚಾರ ನೆನೆಗುದಿಗೆ ಬಿದ್ದಿತ್ತು. ಗಿಡಮರಗಳನ್ನು ತೆರವುಗೊಳಿಸಲು ಒಪ್ಪಿಗೆ ಸೂಚಿಸಲು ಅರಣ್ಯ ಇಲಾಖೆ ಮೀನಮೇಷ ಮಾಡಿದ್ದರಿಂದ ಕಚೇರಿ ಕಟ್ಟಡ ನಿರ್ಮಾಣಕ್ಕೆ ಗ್ರಹಣ ಬಡಿದಿತ್ತು. ಇದರಿಂದಾಗಿ ಗುತ್ತಿಗೆದಾರರು ಆತಂಕ ಪಡುವಂತಾಗಿತ್ತು.

2024ಆ.9ರಂದು ಸ್ಥಳೀಯ ಜೆಸ್ಕಾಂ ಸಹಾಯಕ ಇಂಜಿನಿಯರ್(ವಿ) ಕಾರ್ಯಪಾಲನಾ ಶಾಖೆಯನ್ನು ಉಪವಿಭಾಗ (ಎಇಇ) ಕಚೇರಿಯನ್ನಾಗಿ ಉನ್ನತೀಕರಿಸಲಾಗಿತ್ತು. ಆದರೆ, ಉನ್ನತೀಕರಣಗೊಂಡು ಎರಡು ವರ್ಷಗಳಾದರೂ ಎಇಇ ಕಚೇರಿಗೆ ಪ್ರತ್ಯೇಕ ಕಟ್ಟಡ ಇಲ್ಲದ ಕಾರಣ ಸಹಾಯಕ ಇಂಜಿನಿಯರ್ ಕಾರ್ಯಪಾಲನಾ ಕಚೇರಿ ಕಟ್ಟಡದಲ್ಲಿಯೇ ಕಾರ್ಯನಿರ್ವಹಿಸುತ್ತಿತ್ತು. ಕಂಪ್ಲಿ ಜೆಸ್ಕಾಂ ಇಲಾಖೆಗೆ ಪ್ರತ್ಯೇಕ ಎಇಇ ಕಚೇರಿಯ ಅಗತ್ಯತೆಯನ್ನು ಅರಿತ ಶಾಸಕರಾದ ಜೆ.ಎನ್.ಗಣೇಶ ಅವರು 2025-26ನೇ ಸಾಲಿನ ಜೆಸ್ಕಾಂ ಅನುದಾನದ ಯೋಜನೆಯಡಿಯಲ್ಲಿ 1.50.ಕೋಟಿ ರೂ ವೆಚ್ಚದಲ್ಲಿ ನಿರ್ಮಾಣಕ್ಕೆ 2026 ಏ.18ರಂದು ಭೂಮಿ ಪೂಜೆಯನ್ನು ನೆರವೇರಿಸಿದ್ದರು. ಆದರೆ, ಅರಣ್ಯ ಇಲಾಖೆಯ ನಿಧಾನಗತಿಯಿಂದಾಗಿ ಕಚೇರಿ ನಿರ್ಮಾಣ ನೆನೆಗುದಿಗೆ ಬಿದ್ದಿತ್ತು. ಇತ್ತೀಚೆಗೆ ಪತ್ರಿಕೆಯಲ್ಲಿ ಎಇಇ ಕಚೇರಿ ಕಟ್ಟಡ ನಿರ್ಮಾಣಕ್ಕೆ ಗ್ರಹಣ ಎನ್ನುವ ವಿಸ್ತೃತ ವರದಿಯನ್ನು ಪ್ರಕಟಿಸಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ. ಪತ್ರಿಕೆಯ ವರದಿ ಫಲಶ್ರುತಿಯಿಂದಾಗಿ ಈಗ ಕಚೇರಿ ನಿರ್ಮಾಣಕ್ಕೆ ಜೆಸ್ಕಾಂ ಇಲಾಖೆ ಅಧಿಕಾರಿಗಳು ಮತ್ತು ಗುತ್ತಿಗೆದಾರರು ಮಾರ್ಕಿಂಗ್ ಮಾಡುವ ಮೂಲಕ ಚಾಲನೆ ನೀಡಿದ್ದು, ಶೀಘ್ರದಲ್ಲಿ ಕಚೇರಿ ಕಟ್ಟಡ ನಿರ್ಮಾಣ ಮಾಡುವ ಭರವಸೆಯನ್ನು ನೀಡಿದ್ದಾರೆ. ಈ ಸಂದರ್ಭದಲ್ಲಿ ಜೆಸ್ಕಾಂ ಇಲಾಖೆಯ ಇಇ ಖಾಜ ಮೋಹಿದ್ದೀನ್, ಸಂತೋಷ್, ಕೆ.ಶ್ರೀನಿವಾಸಪ್ರಸಾದ್, ಗುತ್ತಿಗೆದಾರರು ಇದ್ದರು.

# ಸಮಾಜಸೇವೆಯೇ ತಿಪ್ಪೇಸ್ವಾಮಿ ತಾತರ ಆದರ್ಶ : ಸ್ವಾಮೀಜಿಗಳು

**ಜಂಗಮ ಗಣಾರಾಧನೆ, ಧಾರ್ಮಿಕ ವಿಧಿವಿಧಾನಗಳೊಂದಿಗೆ ತಿಪ್ಪೇಸ್ವಾಮಿ ತಾತರ 8ನೇ ಪುಣ್ಯಸ್ಮರಣೋತ್ಸವ**



■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಬಳ್ಳಾರಿ ತಾಲೂಕಿನ ದಾಸರ ನಾಗೇನಹಳ್ಳಿ ಗ್ರಾಮದ ಶ್ರೀಮದ್ ಉಜ್ಜಯಿನಿ ಖಾಸಾ ಶಾಖಾ ಮಠದಲ್ಲಿ ಪರಮಪೂಜ್ಯ ಶ್ರೀ ವೇ.ಮೂ. ಲಿಂಗೈಕ್ಯ ತಿಪ್ಪೇಸ್ವಾಮಿ ತಾತನವರ 8ನೇ ವರ್ಷದ ಪುಣ್ಯಸ್ಮರಣೋತ್ಸವವನ್ನು ಶನಿವಾರ ಭಕ್ತಿಭಾವದಿಂದ ಆಚರಿಸಲಾಯಿತು.

ಪುಣ್ಯಸ್ಮರಣೋತ್ಸವದ ಅಂಗವಾಗಿ ಗಂಗಾಪೂಜೆ, ಗಣಪತಿ ಪೂಜೆ, ನವಗ್ರಹ ಶಾಂತಿ ಹೋಮ, 108 ಜಂಗಮ ಗಣಾರಾಧನೆ, ದೀಕ್ಷೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧಾಭಕ್ತಿಯಿಂದ ನೆರವೇರಿದವು. ನೂರಾರು ಭಕ್ತರು ಭಾಗವಹಿಸಿ ತಿಪ್ಪೇಸ್ವಾಮಿ ತಾತರಿಗೆ ಭಕ್ತಿಪೂರ್ವಕ ನಮನ ಸಲ್ಲಿಸಿ ಆಶೀರ್ವಾದ ಪಡೆದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಆಶೀರ್ವಚನ ನೀಡಿದ ಶ್ರೀ ಶ್ರೀ ಶ್ರೀ ಅಜಾತ ಶಂಭುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ತಿಪ್ಪೇಸ್ವಾಮಿ ತಾತನವರ ಪುಣ್ಯಸ್ಮರಣೋತ್ಸವದ ಅಂಗವಾಗಿ ಶ್ರೀ ನಂಜುಂಡೇಶ್ವರ ಕಲ್ಯಾಣ ಟ್ರಸ್ಟ್ ಪ್ರತಿವರ್ಷ ಧಾರ್ಮಿಕ ಹಾಗೂ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಹೇಳಿದರು.

ತಿಪ್ಪೇಸ್ವಾಮಿ ತಾತರು ತಮ್ಮ ಜೀವನವನ್ನೇ ಸಮಾಜಸೇವೆಗೆ ಮುಡಿಪಾಗಿಟ್ಟು, ಮನುಕುಲದ ಒಳಿತಿಗಾಗಿ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವುದರ ಜೊತೆಗೆ ದೇಶದಲ್ಲಿ ಉತ್ತಮ ಮಳೆ ಹಾಗೂ ಸಮೃದ್ಧ ಬೆಳೆಗಾಗಿ ಹೋಮ-ಹವನಗಳನ್ನು ನಡೆಸುತ್ತಿದ್ದರು. ಅವರ ಆಧ್ಯಾತ್ಮಿಕ ಸೇವೆ, ತ್ಯಾಗ, ಪರೋಪಕಾರ ಮತ್ತು ಪವಾಡಗಳನ್ನು ಕಂಡ ಭಕ್ತರು ಇಂದಿಗೂ ಅವರನ್ನು ಅಪಾರ ಭಕ್ತಿಯಿಂದ ಸ್ಮರಿಸುತ್ತಿದ್ದಾರೆ ಎಂದು ತಿಳಿಸಿದರು.

ನಂತರ ಮಾತನಾಡಿದ ನಂಜುಂಡ ಶ್ರೀಗಳು, ಮಠಕ್ಕೆ ಆಗಮಿಸುವ ಭಕ್ತರ ಕಷ್ಟ-ಸುಖಗಳಿಗೆ ಸ್ಪಂದಿಸಿ ಅವರಿಗೆ ಧೈರ್ಯ ತುಂಬುವ ಗುಣವನ್ನು ತಿಪ್ಪೇಸ್ವಾಮಿ ತಾತರು ಸದಾ ಬೋಧಿಸುತ್ತಿದ್ದರು. ಅವರ ಆದರ್ಶ, ಆಶಯ ಹಾಗೂ ಸೇವಾ ಮನೋಭಾವವನ್ನು ಮುಂದು ವರಿಸಿಕೊಂಡು ಮಠದಲ್ಲಿ ಧಾರ್ಮಿಕ, ಆಧ್ಯಾತ್ಮಿಕ ಮತ್ತು ಸಮಾಜಮುಖಿ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರುದ್ರಮುನಿ ತಾತ ಹಿರೇಮಠ, ಹೆಬ್ಬಾಳ ಶ್ರೀಗಳು ಸೇರಿದಂತೆ ವಿವಿಧ ಮಠಗಳ ಸ್ವಾಮೀಜಿಗಳು, ಬಳ್ಳಾರಿ ನಗರದ ಮಾಜಿ ಶಾಸಕ ಜಿ. ಸೋಮಶೇಖರ ರೆಡ್ಡಿ, ಮಾಜಿ ಬುಡಾ ಅಧ್ಯಕ್ಷ ಮಲ್ಲನಗೌಡ, ಗ್ರಾಮದ ಮುಖಂಡರು, ಶ್ರೀಮಠದ ಶಿಷ್ಯರಾದ ಘನ ಮಲ್ಲನಗೌಡ ಹಾಗೂ ಅಪಾರ ಸಂಖ್ಯೆಯ ಭಕ್ತರು ಭಾಗವಹಿಸಿ ತಿಪ್ಪೇಸ್ವಾಮಿ ತಾತರಿಗೆ ಗೌರವ ನಮನ ಸಲ್ಲಿಸಿದರು.

# ಮದ್ಯಪಾನ, ಮಾದಕ ವಸ್ತುಗಳ ವ್ಯಸನವು ದೇಶದ ಭವಿಷ್ಯಕ್ಕೂ ಗಂಭೀರ ಸವಾಲು: ಶರಣಪ್ಪ ಸಲಾದಪುರ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಮದ್ಯಪಾನ ಮತ್ತು ಮಾದಕ ವಸ್ತುಗಳ ವ್ಯಸನವು ಕೇವಲ ವ್ಯಕ್ತಿಯ ಆರೋಗ್ಯವನ್ನಷ್ಟೇ ಅಲ್ಲ, ಕುಟುಂಬದ ನೆಮ್ಮದಿ, ಸಮಾಜದ ಶಾಂತಿ ಮತ್ತು ದೇಶದ ಭವಿಷ್ಯಕ್ಕೂ ಗಂಭೀರ ಸವಾಲಾಗಿ ಪರಿಣಮಿಸಿದೆ ಎಂದು ಕರ್ನಾಟಕ ರಾಜ್ಯ ಮದ್ಯಪಾನ ನಿಷೇಧ ಮತ್ತು ವ್ಯಸನಮುಕ್ತಿ ಮಂಡಳಿಯ ಅಧ್ಯಕ್ಷ ಶರಣಪ್ಪ ಸಲಾದಪುರ ಕಳವಳ ವ್ಯಕ್ತಪಡಿಸಿದರು.

ನಗರದ ಕೆಂಗೇರಿಯ ಸಮೀಪದ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದಲ್ಲಿ ಕರ್ನಾಟಕ ರಾಜ್ಯ ಮದ್ಯಪಾನ ನಿಷೇಧ ಮತ್ತು ವ್ಯಸನಮುಕ್ತಿ ಮಂಡಳಿ, ಗಾಂಧೀ ಸ್ಮಾರಕ ನಿಧಿ ಹಾಗೂ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಮಾದಕ ವಸ್ತುಗಳ ವಿರೋಧಿ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮದ್ಯಪಾನ ಮತ್ತು ಮಾದಕ ವಸ್ತುಗಳ ವ್ಯಸನವು ವ್ಯಕ್ತಿಯ ದೈಹಿಕ, ಮಾನಸಿಕ ಹಾಗೂ ಸಾಮಾಜಿಕ ಜೀವನವನ್ನು ಕುಸಿತದತ್ತ ತಳ್ಳುತ್ತಿದೆ. ಇದರ ಪರಿಣಾಮವಾಗಿ ಕುಟುಂಬಗಳಲ್ಲಿ ಬಡತನ, ಕಲಹ, ಕೌಟುಂಬಿಕ ಹಿಂಸೆ, ಮಾನಸಿಕ ಒತ್ತಡ ಹಾಗೂ ಸಾಮಾಜಿಕ ಅಸಮಾಧಾನ ಹೆಚ್ಚುತ್ತಿದ್ದು, ಅನೇಕ ಕುಟುಂಬಗಳು ತಮ್ಮ ಸಂತೋಷ ಮತ್ತು ನೆಮ್ಮದಿಯನ್ನು ಕಳೆದುಕೊಳ್ಳುತ್ತಿವೆ ಎಂದು ಅವರು ಹೇಳಿದರು.

ವ್ಯಸನಮುಕ್ತ ಸಮಾಜ ನಿರ್ಮಾಣವು ಕೇವಲ ಸರ್ಕಾರದ ಜವಾಬ್ದಾರಿಯಲ್ಲ; ಅದು ಪ್ರತಿಯೊಬ್ಬ ನಾಗರಿಕ, ಪೋಷಕರು, ಶಿಕ್ಷಕರು, ಧಾರ್ಮಿಕ ಮುಖಂಡರು ಹಾಗೂ ಸಮಾಜದ ಎಲ್ಲ ವರ್ಗಗಳವರ ಸಾಮೂಹಿಕ ಹೊಣೆಗಾರಿಕೆಯಾಗಿದೆ. ಮಕ್ಕಳಲ್ಲಿ ಉತ್ತಮ ಮೌಲ್ಯಗಳನ್ನು ಬೆಳೆಸುವುದು, ಆರೋಗ್ಯಕರ ಜೀವನಶೈಲಿಯನ್ನು ಉತ್ತೇಜಿಸುವುದು ಮತ್ತು ವ್ಯಸನದ ದುಷ್ಪರಿಣಾಮಗಳ ಬಗ್ಗೆ ನಿರಂತರ ಜಾಗೃತಿ ಮೂಡಿಸುವ ಮೂಲಕವೇ ಈ ಪಿಡುಗನ್ನು ಪರಿಣಾಮಕಾರಿಯಾಗಿ ತಡೆಯಬಹುದು ಎಂದು ಅವರು ಅಭಿಪ್ರಾಯಪಟ್ಟರು.



ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷರಾದ ಡಾ. ವೂಡೇ ಪಿ.ಕೃಷ್ಣ ಅವರು ಮಾತನಾಡಿ, ಇಂದಿನ ಯುವಜನರು ಮತ್ತು ವಿದ್ಯಾರ್ಥಿಗಳನ್ನು ಗುರಿಯಾಗಿಸಿಕೊಂಡು ಮಾದಕ ವಸ್ತುಗಳ ದುರುಪಯೋಗ ಹೆಚ್ಚುತ್ತಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆಯಾಗಿದೆ. ಇದರ ಪರಿಣಾಮವಾಗಿ ಅನೇಕ ಪ್ರತಿಭಾವಂತ ಯುವಕರು ಶಿಕ್ಷಣ, ಉದ್ಯೋಗ ಹಾಗೂ ಉಜ್ವಲ ಭವಿಷ್ಯದ ಅವಕಾಶಗಳಿಂದ ವಂಚಿತರಾಗುತ್ತಿದ್ದಾರೆ. ಅದಕ್ಕಾಗಿ ಪ್ರತಿಯೊಬ್ಬ ವಿದ್ಯಾರ್ಥಿಯು ಮದ್ಯಪಾನ ಮತ್ತು ಮಾದಕ ವಸ್ತುಗಳ ವ್ಯಸನದ ವಿರುದ್ಧ ಹೋರಾಡಲು ರಾಯಭಾರಿಯಾಗಿ ಕೆಲಸವನ್ನು ಮಾಡಲು ಮುಂದಾಗುವ ಮೂಲಕ ಆರೋಗ್ಯವಂತ ಸಮಾಜ ಹಾಗೂ ಸದೃಢ ದೇಶ ನಿರ್ಮಾಣಕ್ಕೆ ಸಹಕಾರಿ ಆಗಬೇಕು ಎಂದು ಕರೆ ನೀಡಿದರು.

ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ್ ಅವರು ಮಾತನಾಡಿ, ಮದ್ಯ ಮತ್ತು ಮಾದಕ ವಸ್ತುಗಳ ವಿರುದ್ಧ ಮಕ್ಕಳಿಗೆ ತಮ್ಮ ವಿದ್ಯಾರ್ಥಿ ಜೀವನದಲ್ಲಿಯೇ ಉತ್ತಮ ರೀತಿಯಲ್ಲಿ ಮಾರ್ಗದರ್ಶನ ನೀಡುವಂತಹ ಕೆಲಸ ಆಗಬೇಕಾಗಿದೆ. ಈ ನಿಟ್ಟಿನಲ್ಲಿ, ಶಿಕ್ಷಕರ ನೇಮಕಾತಿಯಲ್ಲಿ ಕೇವಲ ಶೈಕ್ಷಣಿಕ ಅರ್ಹತೆ ಮತ್ತು ಅಂಕಗಳಿಗೆ ಮಾತ್ರ ಆದ್ಯತೆ ನೀಡುವುದು ಸಾಕಾಗುವುದಿಲ್ಲ. ಅಭ್ಯರ್ಥಿಯ ವ್ಯಕ್ತಿತ್ವ, ನೈತಿಕ ಮೌಲ್ಯಗಳು, ಮಕ್ಕಳೊಂದಿಗೆ ವರ್ತಿಸುವ ವಿಧಾನ, ಸಂವಹನ ಕೌಶಲ್ಯ ಹಾಗೂ ಬೋಧನೆಯ ಮೇಲಿನ ಬದ್ಧತೆಯನ್ನೂ ಸಮಾನವಾಗಿ ಪರಿಗಣಿಸಬೇಕು. ಏಕೆಂದರೆ ಶಿಕ್ಷಕರು ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸುವ ಪ್ರಮುಖ ಶಕ್ತಿಯಾಗಿದ್ದಾರೆ. ಆದ್ದರಿಂದ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯಲ್ಲಿ ಈ ಅಂಶಗಳನ್ನು ಮೌಲ್ಯಮಾಪನ ಮಾಡುವ ವ್ಯವಸ್ಥೆಯನ್ನು ಸರ್ಕಾರ ಜಾರಿಗೆ ತರುವ ನಿಟ್ಟಿನಲ್ಲಿ ಕಾರ್ಯವಾಗಬೇಕು ಎಂದು ತಿಳಿಸಿದರು.

ಅಳಂದ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಿ.ಆರ್.ಪಾಟೀಲ್ ಅವರು ಮಾತನಾಡಿ ಮದ್ಯಪಾನದಿಂದ ಉಂಟಾಗುತ್ತಿರುವ ಸಾಮಾಜಿಕ, ಆರ್ಥಿಕ ಹಾಗೂ ಆರೋಗ್ಯ ಸಂಬಂಧಿ ದುಷ್ಪರಿಣಾಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ದೇಶದ ಎಲ್ಲಾ ರಾಜ್ಯಗಳಲ್ಲಿ ಸಂಪೂರ್ಣ ಮದ್ಯಪಾನ ನಿಷೇಧ ಜಾರಿಗೊಳಿಸುವ ಕುರಿತು ಕೇಂದ್ರ ಸರ್ಕಾರ ಸಮಗ್ರ ನೀತಿ ರೂಪಿಸಬೇಕಾಗಿದೆ. ಆರೋಗ್ಯವಂತ, ವ್ಯಸನಮುಕ್ತ ಹಾಗೂ ಸದೃಢ ಸಮಾಜ ನಿರ್ಮಾಣಕ್ಕಾಗಿ ಈ ದಿಸೆಯಲ್ಲಿ ದೃಢವಾದ ಕ್ರಮಗಳನ್ನು ಕೈಗೊಳ್ಳುವುದು ಕಾಲದ ಅಗತ್ಯವಾಗಿದೆ ಎಂದು ಅವರು ಹೇಳಿದರು.

ಇಳಕಲ್‌ನ ಚಿತ್ತರಗಿ ಶ್ರೀ ವಿಜಯಮಹಾಂತೇಶ್ವರ ಸಂಸ್ಥಾನ ಮಠದ ಗುರುಮಹಾಂತ ಸ್ವಾಮೀಜಿ ಅವರು ಮಾತನಾಡಿ, ವಿದ್ಯಾರ್ಥಿಗಳು ದೇಶದ ಭವಿಷ್ಯದ ನಿರ್ಮಾತೃಗಳು. ಆದ್ದರಿಂದ ಅವರ ಮದ್ಯಪಾನ, ಮಾದಕ ವಸ್ತುಗಳ ಬಳಕೆ ಮತ್ತು ಇತರ ಕೆಟ್ಟ ವ್ಯಸನಗಳಿಂದ ದೂರವಿರಬೇಕು. ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಒಳ್ಳೆಯ ಪೌಷ್ಟಿಕಾಂಶ ಹಾಗೂ ಸಮತೋಲನಯುತ ಆಹಾರವನ್ನು ಸೇವಿಸುವುದರ ಜೊತೆಗೆ ಆರೋಗ್ಯಕರ ಜೀವನಶೈಲಿಯನ್ನು ಅನುಸರಿಸಬೇಕು. ದೈಹಿಕ ಆರೋಗ್ಯದೊಂದಿಗೆ ಮಾನಸಿಕ ಆರೋಗ್ಯಕ್ಕೂ ಸಮಾನ ಮಹತ್ವ ನೀಡಿ ಎಂದು ಹೇಳಿದ ಅವರು ವಿದ್ಯಾರ್ಥಿಗಳೇ ಸಮಾಜಕ್ಕೆ ಮಾದರಿಯಾಗಿ, ದೇಶದ ಅಭಿವೃದ್ಧಿ ಮತ್ತು ಪ್ರಗತಿಗೆ ತಮ್ಮ ಅಮೂಲ್ಯ ಕೊಡುಗೆಯನ್ನು ನೀಡುವ ಆದರ್ಶ ನಾಗರಿಕರಾಗುತ್ತಾರೆ ಎಂದು ಕರೆ ನೀಡಿದರು.

ಭಾಲ್ಕಿಯ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದೇವರು ಸ್ವಾಮೀಜಿಯವರು ಮಾತನಾಡಿ, ಮದ್ಯ ಮತ್ತು ಮಾದಕ ವಸ್ತುಗಳಂತಹ ದುಶ್ಚಟಗಳನ್ನು ತ್ಯಜಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಇಂತಹ ವ್ಯಸನಗಳು ವ್ಯಕ್ತಿಯ ಆರೋಗ್ಯ, ಕುಟುಂಬದ ನೆಮ್ಮದಿ ಹಾಗೂ ಸಮಾಜದ ಅಭಿವೃದ್ಧಿಗೆ ಹಾನಿ ಉಂಟುಮಾಡುತ್ತವೆ. ಆದ್ದರಿಂದ ನಾವು ಎಲ್ಲರೂ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಂಡು, ಉತ್ತಮ ಅಭ್ಯಾಸಗಳನ್ನು ಬೆಳೆಸಿ, ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸೋಣ. ಆರೋಗ್ಯವಂತ ನಾಗರಿಕರಿಂದಲೇ ಸದೃಢ, ಸಮೃದ್ಧ ಮತ್ತು ಪ್ರಗತಿಪರ ದೇಶ ನಿರ್ಮಾಣ ಸಾಧ್ಯ ಎಂದರು.

ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ. ನಿಶ್ಚಲಾನಂದನಾಥ ಸ್ವಾಮೀಜಿಗಳು ಮಾತನಾಡಿ ಶತ್ರು ರಾಷ್ಟ್ರಗಳು ನಮ್ಮ ಯುವಶಕ್ತಿಯನ್ನು ದುರ್ಬಳಕೆ ಮಾಡಿಕೊಂಡು ದೇಶವನ್ನು ದುರ್ಬಲಗೊಳಿಸುವ ಉದ್ದೇಶದಿಂದ ಮದ್ಯ ಮತ್ತು ಮಾದಕ ವಸುಗಳ ಅಕ್ರಮ ಸಾಗಣೆಗೆ ವಿವಿಧ ಪ್ರಯತ್ನಗಳನ್ನು ನಡೆಸುತ್ತಿವೆ. ಇಂತಹ ದುಷ್ಟ ಸಂಚುಗಳನ್ನು ವಿಫಲಗೊಳಿಸುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿ. ವಿಶೇಷವಾಗಿ ವಿದ್ಯಾರ್ಥಿಗಳು ಇಂತಹ ವಸ್ತುಗಳಿಂದ ದೂರವಿದ್ದು, ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು. ಆರೋಗ್ಯವಂತ, ಜಾಗೃತ ಮತ್ತು ಶಿಸ್ತುಬದ್ಧ ಯುವಜನತೆ ಬಲಿಷ್ಠ ರಾಷ್ಟ್ರದ ಅಡಿಪಾಯ. ಆದ್ದರಿಂದ ನಾವು ಎಲ್ಲರೂ ಒಟ್ಟಾಗಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸಿ, ದೇಶದ ಭವಿಷ್ಯವನ್ನು ಸುರಕ್ಷಿತ, ಸದೃಢ ಮತ್ತು ಆರೋಗ್ಯಕರವಾಗಿಸೋಣ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಕೋಶಾಧ್ಯಕ್ಷರಾದ ಹೆಚ್. ಬಿ. ದಿನೇಶ್ ಅವರು ವಿದ್ಯಾರ್ಥಿಗಳಿಗೆ ಮದ್ಯಪಾನ ಹಾಗೂ ಮಾದಕ ವಸ್ತುಗಳಿಂದ ದೂರವಿರುವ ಮಹತ್ವವನ್ನು ವಿವರವಾಗಿ ತಿಳಿಸಿದರು ಮತ್ತು ಅವುಗಳನ್ನು ಜೀವನದಲ್ಲಿ ಸಂಪೂರ್ಣವಾಗಿ ತ್ಯಜಿಸುವಂತೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ಕಾರ್ಯಕ್ರಮದಲ್ಲಿ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮಾಜಿ ಅಧ್ಯಕ್ಷರಾದ ಶಶಿಧರ್ ಎಸ್. ಕೋಸಂಬೆ, ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮಂಡಳಿಯ ಮಾಜಿ ನಿರ್ದೇಶಕರಾದ ಗಿರಿಗೌಡರ್, ರಾಜ್ಯ ಮಾಹಿತಿ ಆಯುಕ್ತರಾದ ಡಾ. ಬಿ.ಆರ್. ಮಮತಾ, ಕರ್ನಾಟಕ ಲೋಕಸೇವಾ ಆಯೋಗದ ಮಾಜಿ ಅಧ್ಯಕ್ಷರಾದ ಎಚ್.ಎನ್. ಕೃಷ್ಣ, ಪಂಚಾಯತ್ ರಾಜ್ ಇಲಾಖೆಯ ಮಾಜಿ ನಿರ್ದೇಶಕರಾದ ಕೆಂಪೇಗೌಡ, ಹಿರಿಯ ಗಾಂಧಿವಾದಿ ನಿವೃತ್ತ ಉಪನ್ಯಾಸಕರಾದ ಪ್ರೊ. ಜಿ.ಬಿ. ಶಿವರಾಜು, ಕರ್ನಾಟಕ ಗಾಂಧೀ ಸ್ಮಾರಕ ನಿಧಿಯ ಕಾರ್ಯದರ್ಶಿ ಎಂ.ಸಿ. ನರೇಂದ್ರ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಕಾರ್ಯದರ್ಶಿ ಎನ್.ಎಸ್.ಮಹೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಜ್ಯ ಮಟ್ಟದ ತಂಬಾಕು ನಿಯಂತ್ರಣ ಸಮನ್ವಯ ಸಮಿತಿ ಸಭೆ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ರಾಜ್ಯದಲ್ಲಿ ತಂಬಾಕು ನಿಯಂತ್ರಣ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದು ಹಾಗೂ ವಿವಿಧ ಇಲಾಖೆಗಳ ನಡುವಿನ ಸಮನ್ವಯವನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಿತ್ವಿಕ್ ರಂಜನ್ ಪಾಂಡೆ ಅವರು ತಿಳಿಸಿದರು.

ರಾಜ್ಯದಲ್ಲಿ ತಂಬಾಕು ನಿಯಂತ್ರಣ ಕಾಯ್ದೆ ಜಾರಿ ಕುರಿತಂತೆ ಕೈಗೊಂಡಿರುವ ಕ್ರಮಗಳ ಕುರಿತು ವಿಕಾಸಸೌಧಲ್ಲಿಂದು ಹಮ್ಮಿಕೊಳ್ಳಲಾಗಿದ್ದ ರಾಜ್ಯ ಮಟ್ಟದ ಸಮನ್ವಯ ಸಮಿತಿ (State Level Coordination Committee - Tobacco Control) ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ ತಂಬಾಕು ನಿಯಂತ್ರಣಕ್ಕೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳು ಕೈಗೊಂಡಿರುವ ಕ್ರಮಗಳ ಪರಿಶೀಲನೆ, ಇಲಾಖಾವಾರು ಪ್ರಗತಿ, ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ, ಕೋಟ್ಪಾ (COTPA) ಕಾಯ್ದೆಯ ಪರಿಣಾಮಕಾರಿ ಅನುಷ್ಠಾನ, ಜಾಗೃತಿ ಕಾರ್ಯಕ್ರಮಗಳು ಹಾಗೂ ಮುಂದಿನ ಕಾರ್ಯತಂತ್ರಗಳ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು ಇಲಾಖೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಹಾಗೂ ರಾಜ್ಯ ಮಟ್ಟದ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ಮಾಧ್ಯಮ ಅಕಾಡೆಮಿಯಿಂದ ರಾಷ್ಟ್ರಮಟ್ಟದ ಸುದ್ದಿ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಕರ್ನಾಟಕ ಮಾಧ್ಯಮ ಅಕಾಡೆಮಿಯು ಸುದ್ದಿ ಛಾಯಾಚಿತ್ರಗ್ರಾಹಕರಿಗಾಗಿ ಏರ್ಪಡಿಸಿರುವ "ಈಂಭಿಣ ಂಟಿ ಓಜತಿ" ಎಂಬ ರಾಷ್ಟ್ರ ಮಟ್ಟದ ಪತ್ರಿಕಾ ಛಾಯಾಚಿತ್ರ ಸ್ಪರ್ಧೆಗೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ಜುಲೈ 5ರ ವರೆಗೆ ವಿಸ್ತರಿಸಿದೆ.

ಈ ಸ್ಪರ್ಧೆಯಲ್ಲಿ ಆಯ್ಕೆಯಾಗುವ ಮೊದಲ ಮೂರು ಛಾಯಾಚಿತ್ರಗಳಿಗೆ ಕ್ರಮವಾಗಿ 35,000 /-ರೂ. 25,000/- ರೂ. ಹಾಗೂ 15,000/- ರೂ. ನಗದು ಬಹುಮಾನ ನೀಡಲಾಗುವುದು. ಆಯ್ದ 50 ಛಾಯಾಚಿತ್ರಗಳ ಪ್ರದರ್ಶನವನ್ನು ಏರ್ಪಡಿಸಲಾಗುವುದು.

**ಸ್ಪರ್ಧೆಯ ಷರತ್ತುಗಳು:**

ಈ ಸ್ಪರ್ಧೆಗೆ ಪ್ರವೇಶ ಉಚಿತವಾಗಿದ್ದು, ದಿನಾಂಕ: 01-01-2025 ರಿಂದ 31-5-2026ರ ಅವಧಿಯಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸ್ವೀಕರಿಸಲಾಗುವುದು.

ಪ್ರತಿ ಸುದ್ದಿ ಛಾಯಾಚಿತ್ರಗ್ರಾಹಕರು ತಾವೇ ಚಿತ್ರಿಸಿರುವ ಹಾಗೂ ಪ್ರಕಟವಾಗಿರುವ ಯಾವುದಾದರೂ ಎರಡು ಸುದ್ದಿ ಛಾಯಾಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸಲ್ಲಿಸಬಹುದು.

ಸುದ್ದಿ ಛಾಯಾಚಿತ್ರಗಳನ್ನು ಚಿತ್ರಿಸಿರುವುದಕ್ಕೆ, ಯಾವುದೇ ಭೌಗೋಳಿಕ ಪರಿಮಿತಿ ಇರುವುದಿಲ್ಲ.

ಈ ಸ್ಪರ್ಧೆಯನ್ನು ಸುದ್ದಿ ಛಾಯಾಗ್ರಾಹಕರಿಗಾಗಿ ಮಾತ್ರ ಆಯೋಜಿಸಲಾಗಿದೆ.

ಪ್ರತಿಯೊಬ್ಬ ಸ್ಪರ್ಧಿಯೂ ಅವರು ಸುದ್ದಿ ಛಾಯಾಚಿತ್ರಗ್ರಾಹಕರಾಗಿಕಾರ್ಯನಿರ್ವಹಿಸುತ್ತಿರುವ ಪತ್ರಿಕೆಯ ಸಂಪಾದಕರಿಂದ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕರಣ ಪತ್ರ ಅಥವಾ ಆಯಾ ರಾಜ್ಯ ಸರ್ಕಾರಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಥವಾ ಪಿಐಬಿಯು ಪತ್ರಕರ್ತರಿಗಾಗಿ ನೀಡುವ ಂಛಿಛಿಡಿಜಜುಣಚಿಣುಂಟಿ ಅಚಿಡಿಜ ಹೊಂದಿರುವವರು ಅದರ ದೃಢೀಕೃತ ಪ್ರತಿಯನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸಬೇಕು.

ಛಾಯಾಚಿತ್ರಗಳ ಮೇಲೆ ಹೆಸರು, ಶೀರ್ಷಿಕೆ ಹಾಗೂ ವಾಟರ್ ಮಾರ್ಕ್ ಗಳು ಇರಬಾರದು. ಸ್ಪರ್ಧೆಗೆ ಕಳಿಸುವ ಛಾಯಾಚಿತ್ರಗಳು ಅಂದರೆ ಡಿಜಿಟಲ್ ಇಮೇಜ್ ಗಳನ್ನು JPEG format ನಲ್ಲಿ ಮಾತ್ರ ಸಲ್ಲಿಸಬೇಕು.

ಪ್ರದರ್ಶನಕ್ಕೆ ಆಯ್ಕೆಯಾಗುವ ಛಾಯಾಚಿತ್ರಗಳನ್ನು 20"x30" ಅಳತೆಯಲ್ಲಿ ಮುದ್ರಣ ಮಾಡಿಸಬೇಕಾಗಿರುವುದರಿಂದ ತಾವು ಕಳಿಸುವ ಇಮೇಜ್ ಗಳು 20'x30'" ಅಳತೆಯ, 300 ಡಿಪಿಐ ನಲ್ಲಿದ್ದು ಕನಿಷ್ಠ 5ಎಂ.ಬಿ. ಗಾತ್ರದಲ್ಲಿರಬೇಕು.

ಮೊಬೈಲ್ ಕ್ಯಾಮೆರಾದಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಸ್ಪರ್ಧೆಗೆ ಸ್ವೀಕರಿಸಲಾಗುವುದಿಲ್ಲ.

ಸ್ಪರ್ಧೆಯಲ್ಲಿ ಭಾಗವಹಿಸುವ ಸುದ್ದಿ ಛಾಯಾಚಿತ್ರಗಳು ಸಹಜವಾಗಿರಬೇಕು. ಚಿತ್ರದಲ್ಲಿನ ಯಾವುದೇ ಭಾಗವನ್ನು ತೆಗೆಯುವುದಾಗಲಿ ಅಥವಾ ಸೇರಿಸುವುದಾಗಲಿ ಮಾಡಿರಬಾರದು. ಎಐ ಚಿತ್ರಗಳನ್ನು ಪರಿಗಣಿಸಲಾಗುವುದಿಲ್ಲ.

ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಛಾಯಾಗ್ರಾಹಕರು mediaacademy.karnataka.gov.in ವೆಬ್ ಸೈಟಿನಲ್ಲಿ ಇರುವ ನಿಗದಿತ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿಮಾಡಿ, ತಮ್ಮ ಪಾಸ್ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಇಮೇಜ್ ಗಳನ್ನು focusonnewskma@gmail.com ಇ-ಮೇಲ್ ವಿಳಾಸಕ್ಕೆ ದಿನಾಂಕ: 05-07-2026 ರಂದು ಸಂಜೆ 5:00ಗಂಟೆ ಒಳಗಾಗಿ ಸಲ್ಲಿಸತಕ್ಕದ್ದು. ನಂತರ ಬಂದ ಚಿತ್ರಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ.

ಸ್ಪರ್ಧೆಗೆ ಬಂದಿರುವ ಛಾಯಾಚಿತ್ರಗಳನ್ನು ಪ್ರಶಸ್ತಿಗೆ ಹಾಗೂ ಪ್ರದರ್ಶನಕ್ಕೆ ಆಯ್ಕೆ ಮಾಡಲು ಸುದ್ದಿ ಛಾಯಾಗ್ರಹಣ ಕ್ಷೇತ್ರದಲ್ಲಿ ಅನುಭವ ಹೊಂದಿರುವ ತೀರ್ಪುಗಾರರಿದ್ದು ಅವರು ತೆಗೆದುಕೊಂಡತೀರ್ಮಾನವೇಅಂತಿಮವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9845351766 ಹಾಗೂ 9449245980 ನ್ನು ಕರೆ ಮಾಡುವ ಮೂಲಕ ಅಥವಾ ವಾಟ್ಸಾಪ್ ಮೂಲಕ ಸಂಪರ್ಕಿಸಬಹುದು ಎಂದು ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿ ಸಹನಾ ಎಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬರ ನಿರ್ವಹಣೆ ಸರ್ಕಾರದಿಂದ ಸಲಕ ಸಿದ್ದತೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ : ಡಾ. ಜಿ. ಪರಮೇಶ್ವರ

■ **ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**



ರಾಜ್ಯದಲ್ಲಿ ಬರ ಮತ್ತು ಪ್ರಕೃತಿ ವಿಕೋಪ ನಿರ್ವಹಣೆಗೆ ಸರ್ಕಾರವು ಸಕಲ ಸಿದ್ಧತೆ ಮಾಡಿಕೊಂಡಿದ್ದು, ಪ್ರತಿಯೊಂದು ಜಿಲ್ಲೆಯ ಜಿಲ್ಲಾಧಿಕಾರಿಗಳ ಖಾತೆಗೆ ತಲಾ 5 ಕೋಟಿ ರೂಪಾಯಿಗಳನ್ನು ಪ್ರತ್ಯೇಕವಾಗಿ ಬಿಡುಗಡೆ ಮಾಡಲಾಗಿದೆ ಎಂದು ಉಪ ಮುಖ್ಯಮಂತ್ರಿ ಹಾಗೂ ಚಿತ್ರದುರ್ಗ ಜಿಲ್ಲಾ ಪ್ರಕೃತಿ ವಿಕೋಪ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ ತಿಳಿಸಿದರು.

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಪ್ರಕೃತಿ ವಿಕೋಪ ಪರಿಶೀಲನಾ ಸಭೆಯಲ್ಲಿ ಅವರು ಅಧಿಕಾರಿಗಳಿಗೆ ಪ್ರಮುಖ ಸೂಚನೆಗಳನ್ನು ನೀಡಿದರು.

ಬರ ಮತ್ತು ಪ್ರಕೃತಿ ವಿಕೋಪ ನಿರ್ವಹಣೆಯ ಒಟ್ಟಾರೆ ಜವಾಬ್ದಾರಿ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮೇಲಿರುತ್ತದೆ. ಜಿಲ್ಲಾಧಿಕಾರಿಗಳ ರೂ. 5 ಕೋಟಿ ಹಣವನ್ನು ಬರ ಮತ್ತು ಪ್ರಕೃತಿ ವಿಕೋಪದ ತುರ್ತು ಕಾರ್ಯಗಳಿಗೆ ಸಮರ್ಪಕವಾಗಿ ಬಳಸಿಕೊಳ್ಳಬೇಕು. ಹೆಚ್ಚುವರಿ ಅನುದಾನದ ಅಗತ್ಯವಿದ್ದಲ್ಲಿ ತಕ್ಷಣವೇ ಪ್ರಸ್ತಾವನೆ ಸಲ್ಲಿಸಬೇಕು. ಅದಕ್ಕೆ ತಕ್ಷಣವೇ ಅನುಮೋದನೆ ನೀಡಲಾಗುವುದು. ಈ ಬಗ್ಗೆ ಯಾವುದೇ ಆತಂಕ ಬೇಡ. ಬರ ಪರಿಹಾರಕ್ಕೆ ಸಂಬಂಧಿಸಿದಂತೆ ದೆಹಲಿಯಲ್ಲಿ ಕೇಂದ್ರ ಸರ್ಕಾರದೊಂದಿಗೆ ಚರ್ಚೆ ನಡೆಸಿ, ಶೀಘ್ರದಲ್ಲೇ ರಾಜ್ಯದ ಒಟ್ಟಾರೆ ವರದಿಯನ್ನು ಮುಖ್ಯಮಂತ್ರಿಗಳು ಹಾಗೂ ನಾವು ಸಲ್ಲಿಸಲಿದ್ದೇವೆ. ಜಿಲ್ಲಾಧಿಕಾರಿ ಹಾಗೂ ಸಿಇಒ ಅವರೇ ಈ ಕಾರ್ಯದ ನೋಡಲ್ ಅಧಿಕಾರಿಗಳಾಗಿದ್ದು, ಅವರು ನೀಡುವ ಪ್ರತಿಯೊಂದು ಆದೇಶ ಹಾಗೂ ಸೂಚನೆಗಳಿಗೆ ಎಲ್ಲಾ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಸ್ಪಂದಿಸಬೇಕು. ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು. ಯಾವುದೇ ಅಧಿಕಾರಿ ಬರ ಕೆಲಸದಿಂದ ನುಣುಚಿಕೊಳ್ಳುವಂತಿಲ್ಲ. ಇಲಾಖೆಯ ಅಧಿಕಾರಿಗಳು ಸಹಕಾರ ನೀಡದಿದ್ದರೆ ಅಥವಾ ನಿರ್ಲಕ್ಷ್ಯ ವಹಿಸಿದರೆ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಎಚ್ಚರಿಕೆ ನೀಡಿದರು.

**ಕೊಳವೆ ಬಾವಿಗಳ ವಿದ್ಯುದ್ದೀಕರಣಕ್ಕೆ ಗಡುವು:**

ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಲು, ಹೊಸದಾಗಿ ಕೊರೆದಿರುವ ಹಾಗೂ ಬಾಕಿ ಇರುವ ಎಲ್ಲಾ ಕುಡಿಯುವ ನೀರಿನ ಕೊಳವೆ ಬಾವಿಗಳಿಗೆ ಕೇವಲ 15 ದಿನಗಳ ಒಳಗೆ ಕಡ್ಡಾಯವಾಗಿ ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರು ಬೆಸ್ಕಾಂ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಸಾಮಾನ್ಯವಾಗಿ ಎಲ್ಲಾ ಪ್ರಗತಿ ಪರಿಶೀಲನಾ ಸಭೆಗಳಲ್ಲೂ ಕೊಳವೆ ಬಾವಿ ಕೊರೆದರೂ ಪಂಪ್ ಹಾಗೂ ಮೋಟಾರ್ ಅಳವಡಿಸದಿರುವುದು ಅಥವಾ ಮೋಟಾರ್ ಇದ್ದರೂ ವಿದ್ಯುತ್ ಸಂಪರ್ಕ ನೀಡದೆ ಇರುವ ಸಮಸ್ಯೆಗಳು ಕೇಳಿಬರುತ್ತಿವೆ. ಇದಕ್ಕೆ ಇನ್ನು ಮುಂದೆ ಆಸ್ಪದ ನೀಡಬಾರದು ಎಂದರು.

**ಅಧಿಕಾರಿಗಳಿಗೆ ಕೇಂದ್ರಸ್ಥಾನದಲ್ಲಿರಲು ತಾಕೀತು:**

ನೋಡಲ್ ಅಧಿಕಾರಿಗಳ ಜವಾಬ್ದಾರಿ ಮತ್ತು ವರದಿ ಪ್ರತಿ ತಾಲೂಕಿಗೆ ನೇಮಕವಾಗಿರುವ ನೋಡಲ್ ಅಧಿಕಾರಿಗಳು ತಾಲೂಕಿನ ಕುಡಿಯುವ ನೀರಿನ ಸಮಸ್ಯೆ, ಒಣಗುತ್ತಿರುವ ಬೋರ್‌ವೆಲ್‌ಗಳು ಹಾಗೂ ಮಳೆಯ ಪರಿಸ್ಥಿತಿಯ ಬಗ್ಗೆ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ನಿರಂತರವಾಗಿ ದೈನಂದಿನ ವರದಿ ನೀಡಬೇಕು. ಎಲ್ಲಾದರೂ ನೀರಿನ ಸಮಸ್ಯೆ ತಲೆದೂರಿದರೆ ತಕ್ಷಣವೇ ಮೇಲಧಿಕಾರಿಗಳ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳಬೇಕು. ಈ ಬರಗಾಲದ ಸಂದರ್ಭದಲ್ಲಿ ಎಲ್ಲಾ ಅಧಿಕಾರಿಗಳು ಕಡ್ಡಾಯವಾಗಿ ತಮ್ಮ ತಮ್ಮ ಕೇಂದ್ರ ಸ್ಥಾನದಲ್ಲೇ ಇರಬೇಕು ಮತ್ತು ಸಾರ್ವಜನಿಕರಿಗೆ ಯಾವುದೇ ತುರ್ತು ಸಂದರ್ಭದಲ್ಲಿ ತಕ್ಷಣವೇ ಲಭ್ಯವಿರಬೇಕು.ಹತ್ತಿರದ ಜಿಲ್ಲೆಗಳಿಂದ ದಿನನಿತ್ಯ ಓಡಾಟ ನಡೆಸುವ ಅಧಿಕಾರಿಗಳಿಗೆ ರಿಯಾಯಿತಿ ಇಲ್ಲ. ಜಿಲ್ಲಾಧಿಕಾರಿಗಳು ಇಂತಹ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಬೇಕು ಎಂದು ಉಪ ಮುಖ್ಯಮಂತ್ರಿ ನಿರ್ದೇಶನ ನೀಡಿದರು.

ರಾಜ್ಯ ವಿಪತ್ತು ನಿರ್ವಹಣ ಪ್ರಾಧಿಕಾರದ ಆಯುಕ್ತ ಹೊನ್ನಾಂಭ ಮಾನತಾಡಿ, ಜಿಲ್ಲೆಯಲ್ಲಿ ಸದ್ಯ ಒಟ್ಟು 201 ಮಳೆ ಮಾಪನ ಕೇಂದ್ರಗಳನ್ನು ಅಳವಡಿಸಲಾಗಿದೆ. ಇವುಗಳಲ್ಲಿ ಸದ್ಯ 126 ಕೇಂದ್ರಗಳು ಲಭ್ಯವಿದ್ದು, 109 ಕೇಂದ್ರಗಳು ಸುಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಉಳಿದ 17 ಕೇಂದ್ರಗಳು ರಿಪೇರಿಯಾಗಬೇಕಾಗಿದ್ದು, ಅದರಲ್ಲಿ ಈಗಾಗಲೇ 9 ಕೇಂದ್ರಗಳನ್ನು ದುರಸ್ತಿ ಮಾಡಲಾಗಿದ್ದು, ಇನ್ನ 7 ಕೇಂದ್ರಗಳ ತಾಂತ್ರಿಕ ಸಮಸ್ಯೆಯನ್ನು ಸರಿಪಡಿಸಲಾಗಿದೆ.

ಈ ಹಿಂದೆ ಸರಿಯಾಗಿ ಕಾರ್ಯನಿರ್ವಹಿಸದ 97 ಕೇಂದ್ರಗಳ ಪೈಕಿ 75 ಕೇಂದ್ರಗಳನ್ನು ಸಂಪೂರ್ಣವಾಗಿ ಬದಲಾಯಿಸಲು ಈಗಾಗಲೇ ಕಾರ್ಯಾದೇಶ ನೀಡಲಾಗಿದೆ. ಏಜೆನ್ಸಿ ಮೂಲಕ ಅನುಸ್ಥಾಪನಾ ಪ್ರಕ್ರಿಯೆ ಪ್ರಗತಿಯಲ್ಲಿದೆ. ಈ ಎಲ್ಲ ಪ್ರಕ್ರಿಯೆಗಳು ಪೂರ್ಣಗೊಳ್ಳಲು ಕನಿಷ್ಠ ಎರಡು ತಿಂಗಳ ಕಾಲಾವಕಾಶ ಬೇಕಾಗಬಹುದು ಎಂದು ಮಾಹಿತಿ ನೀಡಿದರು.

**ಗೋಶಾಲೆ ಮತ್ತು ಮೇವು ಬ್ಯಾಂಕ್‌ಗಳ ಸ್ಥಾಪನೆ:**

ಜಿಲ್ಲೆಯಲ್ಲಿನ ಪರಿಸ್ಥಿತಿಗೆ ಅನುಗುಣವಾಗಿ ಅಗತ್ಯವಿರುವ ಕಡೆಗಳಲ್ಲಿ ಗೋಶಾಲೆ ಹಾಗೂ ಮೇವು ಬ್ಯಾಂಕ್‌ಗಳನ್ನು ಆರಂಭಿಸಲು ಕ್ರಮ ಕೈಗೊಳ್ಳಬೇಕು. ಈ ಹಿಂದೆ ಇದ್ದ ವ್ಯವಸ್ಥೆಯನ್ನು ಪರಾಮರ್ಶಿಸಿ, ಎಲ್ಲಿ ಅಗತ್ಯವಿದೆಯೋ ಅಲ್ಲಿ ತಕ್ಷಣವೇ ಇವುಗಳನ್ನು ಕಾರ್ಯಗತಗೊಳಿಸಲು ಅಧಿಕಾರಿಗಳು ಪರಿಶೀಲನೆ ನಡೆಸಬೇಕು. ಪ್ರಕೃತಿ ವಿಕೋಪದ ನಿರ್ವಹಣೆಗಾಗಿ ಎನ್‌ಡಿಆರ್‌ಎಫ್ ಅನುದಾನವನ್ನು ಮುಂಚಿತವಾಗಿಯೇ ಕಾಯ್ದಿರಿಸಿಕೊಂಡು ಬಳಸಿಕೊಳ್ಳಬೇಕು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಹೇಳಿದರು.

ಹವಾಮಾನ ವೈಪರೀತ್ಯ ಹಾಗೂ ಮಳೆಯಿಂದಾಗಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ. ಅದರಲ್ಲೂ ಚಿತ್ರದುರ್ಗ ಜಿಲ್ಲೆಯಲ್ಲಿ ರಾಜ್ಯದಲ್ಲೇ ಅತಿ ಹೆಚ್ಚು ಚಿಕೂನ್ ಗುನ್ಯಾ ಪ್ರಕರಣಗಳು ದಾಖಲಾಗುತ್ತಿರುವುದರಿಂದ, ಆರೋಗ್ಯ ಇಲಾಖೆ ಹಾಗೂ ಸ್ಥಳೀಯ ಸಂಸ್ಥೆಗಳು ಈ ಕುರಿತು ತೀವ್ರ ಮುನ್ನೆಚ್ಚರಿಕೆ ವಹಿಸಬೇಕು ಎಂದರು.

**ಬಿತ್ತನೆ ಬೀಜ ಹಾಗೂ ರಸಗೊಬ್ಬರ ದಾಸ್ತಾನಿಗೆ ಸೂಚನೆ:**

ಕೃಷಿ ಚಟುವಟಿಕೆಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರವನ್ನು ಮುನ್ನೆಚ್ಚರಿಕೆಯಾಗಿ ದಾಸ್ತಾನು ಮಾಡಿಕೊಳ್ಳಬೇಕು ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಅಧಿಕಾರಿಗಳು ಮಾಹಿತಿ ನೀಡಿ, ಜಿಲ್ಲೆಗೆ ಈ ಮುಂಗಾರು ಹಂಗಾಮಿಗೆ ಒಟ್ಟು 74,000 ಮೆಟ್ರಿಕ್ ಟನ್ ರಸಗೊಬ್ಬರದ ಅವಶ್ಯಕತೆಯಿದ್ದು, ಸದ್ಯ 48,000 ಮೆಟ್ರಿಕ್ ಟನ್ ಲಭ್ಯವಿದೆ. ಇದರಲ್ಲಿ ಈಗಾಗಲೇ 20,000 ಮೆಟ್ರಿಕ್ ಟನ್ ವಿತರಣೆ ಮಾಡಲಾಗಿದ್ದು, ಇನ್ನು 28,000 ಮೆಟ್ರಿಕ್ ಟನ್ ದಾಸ್ತಾನಿದೆ ಎಂದು ತಿಳಿಸಿದರು.

ಈ ವೇಳೆ ಮಾತನಾಡಿದ ಸಚಿವರು, ಇನ್ನುಳಿದ ರಸಗೊಬ್ಬರವನ್ನು ಶೀಘ್ರದಲ್ಲೇ ತರಿಸಿಕೊಂಡು ದಾಸ್ತಾನು ಮಾಡಿಕೊಳ್ಳಬೇಕು. ಒಂದು ವೇಳೆ ಹಠಾತ್ ಮಳೆ ಬಂದಲ್ಲಿ ರೈತರು ಏಕಾಏಕಿ ರಸಗೊಬ್ಬರ ಮತ್ತು ಬಿತ್ತನೆ ಬೀಜಕ್ಕಾಗಿ ಆಹಾಕಾರ ಮಾಡಬಾರದು. ಹಾವೇರಿ ಜಿಲ್ಲೆಯಲ್ಲಿ ಆದಂತಹ ಪರಿಸ್ಥಿತಿ ಇಲ್ಲಿ ಮರುಕಳಿಸಬಾರದು. ಆದ್ದರಿಂದ ಮುನ್ನೆಚ್ಚರಿಕೆಯಾಗಿ ಬಿತ್ತನೆ ಬೀಜ ಹಾಗೂ ರಸಗೊಬ್ಬರವನ್ನು ದಾಸ್ತಾನು ಮಾಡಿಟ್ಟುಕೊಳ್ಳಬೇಕು ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ರಸಗೊಬ್ಬರ ವಿತರಣೆಗೆ ಸಂಬಂಧಿಸಿದಂತೆ ಆಪ್ ಮೂಲಕ ನೊಂದಣಿ ಮಾಡಿಕೊಂಡು ವಿತರಿಸುವ ನಿಯಮದಿಂದ ರೈತರಿಗೆ ತೊಂದರೆಯಾಗುತ್ತಿದ್ದು, ವಿನಾಯಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಕೋರಿದರು. ಇದಕ್ಕೆ ಸ್ಪಂದಿಸಿದ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಅವರು ಸ್ಥಳೀಯ ಪರಿಸ್ಥಿತಿಯನ್ನು ನೋಡಿಕೊಂಡು ಪ್ರಾಯೋಗಿಕವಾಗಿ ಸೂಕ್ತ ನಿರ್ಧಾರ ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದರು. ಆದರೆ ಈ ಪ್ರಕ್ರಿಯೆಯಲ್ಲಿ ಯಾವುದೇ ದುರುಪಯೋಗವಾಗಬಾರದು ಮತ್ತು ರೈತರಿಗೆ ತೊಂದರೆಯಾಗದಂತೆ ಜವಾಬ್ದಾರಿಯಿಂದ ಕೆಲಸ ಮಾಡಬೇಕು ಎಂದು ಅವರು ಎಚ್ಚರಿಸಿದರು.

**ಕೆ.ಎಂ.ಇ.ಆರ್.ಸಿ ಹಾಗೂ ಡಿಎಂಎಫ್ ಅನುದಾನಗಳ ಬಳಕೆ:**

ಚಿತ್ರದುರ್ಗ ಜಿಲ್ಲೆಯನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ, ಬರಗಾಲದ ಹಿನ್ನಲೆಯಲ್ಲಿ ಕುಡಿಯುವ ನೀರಿಗೆ ಕೆ.ಎಂ.ಇ.ಆರ್.ಸಿ ಹಾಗೂ ಡಿಎಂಎಫ್ ಅನುದಾನಗಳಬಳಕೆಕುರಿತುಕೆ.ಎಂ.ಇ.ಆರ್.ಸಿ ಅಧ್ಯಕ್ಷರ ಜೊತೆ ಚರ್ಚಿಸುವುದಾಗಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಹೇಳಿದರು.

ಈ ಹಿಂದೆ ಕೆ.ಎಂ.ಇ.ಆರ್.ಸಿ ಅನುದಾನವನ್ನು ಕೇವಲ ಗಣಿಗಾರಿಕೆ ಚಟುವಟಿಕೆ ಇರುವ ತಾಲೂಕುಗಳಿಗೆ ಮಾತ್ರ ಸೀಮಿತಗೊಳಿಸಲಾಗಿತ್ತು. ಆದರೆ, ಪ್ರಸ್ತುತ ಪರಿಸ್ಥಿತಿಯಲ್ಲಿ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳ ಮಾದರಿಯಲ್ಲೇ ಇಡೀ ಜಿಲ್ಲೆಯನ್ನು ಒಂದು ಘಟಕವನ್ನಾಗಿ ಪರಿಗಣಿಸಿ ಕುಡಿಯುವ ನೀರಿಗೂ ಈ ಅನುದಾನ ಬಳಸಲು ವಿನಾಯಿತಿ ಕೋರಲಾಗುವುದು ಎಂದರು

ಡಿಸಿಸಿ ಬ್ಯಾಂಕ್ ಬೆಳೆಸಾಲ ಮನ್ನಾ ಮಾಡಲು ಸಂಸದ ಗೋವಿಂದ ಕಾರಜೋಳ ಮನವಿ

ಜಿಲ್ಲೆಯ ಡಿಸಿಸಿ ಬ್ಯಾಂಕ್‌ಗಳಲ್ಲಿ ರೈತರು ಪಡೆದಿರುವ ಅಲ್ಪಾವಧಿ ಬೆಳೆಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು ಎಂದು ಸಂಸದ ಗೋವಿಂದ ಕಾರಜೋಳ ಸಭೆಯಲ್ಲಿ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಅವರಲ್ಲಿ ಮನವಿ ಮಾಡಿದರು.

ಜಿಲ್ಲೆಯ ಡಿಸಿಸಿ ಬ್ಯಾಂಕ್‌ಗಳಲ್ಲಿ ರೈತರು ಪಡೆದಿರುವ ಅಲ್ಪಾವಧಿ ಬೆಳೆಸಾಲವನ್ನು ಮನ್ನಾ ಮಾಡುವ ಮೂಲಕ ಸಂಕಷ್ಟದಲ್ಲಿರುವ ಸರ್ಕಾರ ರೈತರಿಗೆ ನೆರವಾಗಬೇಕು.

ಪ್ರಸಕ್ತ ಸಾಲಿನಲ್ಲಿ ಡಿಸಿಸಿ ಬ್ಯಾಂಕ್ ವತಿಯಿಂದ ಸುಮಾರು 70,000 ರೈತರಿಗೆ ಸಾಲ ನೀಡುವ ಗುರಿ ಹೊಂದಲಾಗಿತ್ತು. ಆದರೆ, ಇದುವರೆಗೆ ಕೇವಲ 5,000 ರೈತರಿಗೆ ಮಾತ್ರ ಸಾಲ ವಿತರಿಸಲಾಗಿದೆ. ರೈತರು ಬೆಳೆ ನಷ್ಟದಿಂದ ಕಂಗಾಲಾಗಿದ್ದಾರೆ. ಹೀಗಾಗಿ, ಬೆಳೆ ವಿಮೆಯ ನೂರರಷ್ಟು (100%) ಪ್ರೀಮಿಯಂ ಕಂತನ್ನು ರಾಜ್ಯ ಸರ್ಕಾರವೇ ಭರಿಸಿ ರೈತರಿಗೆ ಆರ್ಥಿಕ ಅನುಕೂಲ ಮಾಡಿಕೊಡಬೇಕು.

ಚಿತ್ರದುರ್ಗ ಜಿಲ್ಲೆಯಲ್ಲಿ ಸುಮಾರು 17 ಲಕ್ಷ ಕುರಿ ಮತ್ತು ಮೇಕೆಗಳು ಹಾಗೂ 2.5 ಲಕ್ಷ ದನಕರುಗಳಿವೆ. ಪ್ರಸ್ತುತ ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ತೀವ್ರ ಸಮಸ್ಯೆ ಎದುರಾಗಿದೆ. ವಿಶೇಷವಾಗಿ ಮಧ್ಯ ಕರ್ನಾಟಕ ಭಾಗದಲ್ಲಿ ಕುರಿ ಸಾಕಾಣಿಕೆಯನ್ನು ಅವಲಂಬಿಸಿರುವ ಶೇ. 90 ರಷ್ಟು ಜನರು ಹಿಂದುಳಿದ ಮತ್ತು ಕಾಡುಗೊಲ್ಲ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಇವರ ಜೀವನೋಪಾಯಕ್ಕಾಗಿ ಜಾನುವಾರುಗಳಿಗೆ ಉಚಿತವಾಗಿ ಮೇವು ಮತ್ತು ನೀರಿನ ವ್ಯವಸ್ಥೆಯನ್ನು ಸರ್ಕಾರ ಕಲ್ಪಿಸಬೇಕು ಎಂದು ಸಂಸದ ಗೋವಿಂದ ಕಾರಜೋಳ ವಿನಂತಿ ಮಾಡಿಕೊಂಡರು.

**ವಿವಿ ಸಾಗರ ಜಲಾಶಯದಿಂದ ನೀರು ತುಂಬಿಸಲು ಮನವಿ:** ಮಳೆಯನ್ನೇ ನಂಬಿಕೊಂಡಿರುವ ಮೊಳಕಾಲ್ಮೂರು ತಾಲೂಕಿನ ಕೆರೆಗಳಿಗೆ ನೀರು ಒದಗಿಸಲು ಇರುವ ಏಕೈಕ ಮಾರ್ಗ ಜಲಾಶಯಗಳು. ಸದ್ಯ ವಿವಿ ಸಾಗರ ಜಲಾಶಯದಲ್ಲಿ ಶೇಕಡಾ 30 ರಷ್ಟು ನೀರಿದ್ದು, ಅಲ್ಲಿಂದ ಮೊಳಕಾಲ್ಮೂರು ತಾಲೂಕಿನ ಪಕ್ಕದಲ್ಲಿರುವ ಕೆರೆಗಳಿಗೆ ನೀರು ಹರಿಸಲು ಅವಕಾಶ ಮಾಡಿಕೊಡಬೇಕು ಎಂದು ಶಾಸಕ ಎನ್.ವೈ.ಗೋಪಾಕೃಷ್ಣ ಮನವಿ ಮಾಡಿದರು.

ಮುಂದಿನ 2–3 ತಿಂಗಳ ನಿರ್ವಹಣೆ: ಕೆರೆಗಳಿಗೆ ನೀರು ತುಂಬಿಸಿದರೆ ಅಲ್ಲಿಂದ ಬೋರ್‌ವೆಲ್‌ಗಳ ಮೂಲಕ ಕುಡಿಯುವ ನೀರು ಒದಗಿಸಲು ಸಾಧ್ಯವಾಗುತ್ತದೆ. ಮುಂದಿನ ಎರಡು ಮೂರು ತಿಂಗಳುಗಳ ಕಾಲ ಪರಿಸ್ಥಿತಿಯನ್ನು ನಿರ್ವಹಣೆ ಮಾಡಲು ಸರ್ಕಾರ ತಕ್ಷಣವೇ ಸೂಕ್ತ ಆದೇಶ ಹಾಗೂ ಅನುಮತಿ ನೀಡಬೇಕು. ಇದರಿಂದ ಮೊಳಕಾಲ್ಮೂರು ಕ್ಷೇತ್ರ ವ್ಯಾಪ್ತಿಯಲ್ಲಿ ಉದ್ಭವಿಸಬಹುದಾದ ಯಾವುದೇ ಕುಡಿಯುವ ನೀರಿನ ಸಮಸ್ಯೆಯನ್ನು ಯಶಸ್ವಿಯಾಗಿ ತಡೆಗಟ್ಟಬಹುದು ಎಂದು ಅವರು ಸಭೆಯಲ್ಲಿ ಒತ್ತಾಯಿಸಿದರು.

ಶಾಸಕ ಡಾ. ಎಂ. ಚಂದ್ರಪ್ಪ ಹೊಳಲ್ಕೆರೆ ತಾಲ್ಲೂಕು ಮಲೆನಾಡು ಭಾಗಕ್ಕೆ ಹೊಂದಿಕೊಂಡಿದ್ದರೂ ಸಹ, ಈ ಬಾರಿ ತೀವ್ರ ಬರಗಾಲದ ಪರಿಸ್ಥಿತಿಯನ್ನು ಎದುರಿಸುತ್ತಿದ್ದು, ತಾಲ್ಲೂಕನ್ನು ಸಂಪೂರ್ಣ ಬರಪೀಡಿತ ಪ್ರದೇಶವೆಂದು ಘೋಷಿಸಲಾಗಿದೆ. ತಾಲ್ಲೂಕಿನಲ್ಲಿ ಶೇ. 45 ಕ್ಕಿಂತಲೂ ಹೆಚ್ಚು ಮಳೆ ಕೊರತೆಯಾಗಿದೆ. ಕಳೆದ ನಾಲ್ಕು ತಿಂಗಳುಗಳಿಂದ ಕುಡಿಯುವ ನೀರಿಗಾಗಿ ಬೋರ್‌ವೆಲ್‌ಗಳನ್ನೇ ಆಶ್ರಯಿಸಬೇಕಾದ ಅನಿವಾರ್ಯತೆಸೃಷ್ಟಿಯಾಗಿದೆ.ಸಾರ್ವಜನಿಕರ ನೀರಿನ ಅಗತ್ಯವನ್ನು ಪೂರೈಸಲು ಈಗಾಗಲೇ 127 ಬೋರ್‌ವೆಲ್‌ಗಳನ್ನು ಕೊರೆಸಲಾಗಿದ್ದು, ಆ ಪೈಕಿ ಸುಮಾರು 28 ರಿಂದ 29 ಬೋರ್‌ವೆಲ್‌ಗಳು ವಿಫಲವಾಗಿವೆ ಅಧಿಕಾರಿಗಳು ಅನುದಾನದ ಕೊರತೆಯನ್ನು ಹೇಳುತ್ತಿದ್ದರೂ, ತುರ್ತು ಪರಿಸ್ಥಿತಿಯ ಹಿನ್ನೆಲೆಯಲ್ಲಿ ಈ ಕ್ರಮ ಅನಿವಾರ್ಯವಾಗಿತ್ತು. ಇದಕ್ಕಾಗಿ ಸುಮಾರು 1.50 ಕೋಟಿ ರೂಪಾಯಿಗಳ ವೆಚ್ಚದ ಪ್ರಸ್ತಾವನೆ ಬಾಕಿ ಉಳಿದಿದೆ. ಮುಂಬರುವ ತಿಂಗಳುಗಳಲ್ಲಿ ಮಳೆಯಾಗದಿದ್ದರೆ ಪರಿಸ್ಥಿತಿ ಇನ್ನಷ್ಟು ಕೈಮೀರಲಿದೆ. ಆದ್ದರಿಂದ ಸರ್ಕಾರವು ತಕ್ಷಣವೇ ಮಧ್ಯಪ್ರವೇಶಿಸಿ, ಬಾಕಿ ಇರುವ ಬೋರ್‌ವೆಲ್ ಬಿಲ್ಲುಗಳ ಹಣವನ್ನು ಬಿಡುಗಡೆ ಮಾಡಬೇಕು ಮತ್ತು ಕುಡಿಯುವ ನೀರಿನ ಸಮಸ್ಯೆಗೆ ಸಮರ್ಪಕ ಪರಿಹಾರ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಪರಿಷತ್ ಸದಸ್ಯರಾದ ಶ್ರೀನಿವಾಸ ಮಾತನಾಡಿ ವಿವಿ ಸಾಗರ ನಾಲೆಯ ವ್ಯಾಪ್ತಿಯಲ್ಲಿ ಹೊಸದಾಗಿ ನಿರ್ಮಿಸಲಾಗಿರುವ ಲಿಂಕ್ ಲೈನ್ ಕೆಳಭಾಗಕ್ಕೆ ಬಿದ್ದು ದಿನನಿತ್ಯ ಜನರು ಮತ್ತು ಜಾನುವಾರುಗಳು ಪ್ರಾಣ ಕಳೆದುಕೊಳ್ಳುವ ಭೀತಿ ಎದುರಾಗಿದೆ. ಹಿರಿಯೂರಿನ ಲಕ್ಕೇನಹಳ್ಳಿ, ಬುಡ್ನಹಟ್ಟಿ, ಬುಚ್ಚಪ್ಪನಹಟ್ಟಿ ಮುಂತಾದ ಗ್ರಾಮಗಳ ಸಾರ್ವಜನಿಕರು, ಕುರಿಗಾಹಿಗಳು ಹಾಗೂ ದನಕರುಗಳು ಓಡಾಡಲು ಸಾಕಷ್ಟು ತೊಂದರೆಯಾಗುತ್ತಿದೆ. ಐಮಂಗಲ ಹೋಬಳಿಯಲ್ಲಿ ಕೆರೆ ತುಂಬಿಸುವ ಯೋಜನೆಗಾಗಿ ಇತ್ತೀಚೆಗೆ 300ಕ್ಕೂ ಹೆಚ್ಚು ರೈತರು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ 244 ಕೋಟಿ ರೂ. ಗಳ ಯೋಜನೆಗೆ ಮಂಜೂರಾತಿ ನೀಡುವಂತೆ ಮನವಿ ಮಾಡಿದ್ದಾರೆ. ಜವಗೊಂಡನಹಳ್ಳಿ 17 ಕೆರೆಗಳನ್ನು ತುಂಬಿಸುವ ಯೋಜನೆಯ ಡಿಪಿಆರ್ ಸಿದ್ಧವಾಗಿದ್ದು, ಶೀಘ್ರದಲ್ಲೇ ಕ್ಯಾಬಿನೆಟ್ ಮುಂದೆ ಬರಲಿದೆ. ಉಪ ಮುಖ್ಯಮಂತ್ರಿಗಳು ಇದಕ್ಕೆ ಶೀಘ್ರ ಒಪ್ಪಿಗೆ ಕೊಡಿಸಬೇಕು ಎಂದು ವಿನಂತಿಸಿದರು.

## ಮಳೆ ಮಾಪನ ಕೇಂದ್ರಗಳ ದುರಸ್ತಿಗೆ ನಿರ್ದೇಶನ

ಪ್ರಕೃತಿ ವಿಕೋಪದ ಸಂದರ್ಭದಲ್ಲಿ ನಿಖರವಾದ ಮಾಹಿತಿಯನ್ನು ಪಡೆಯಲು ಮಳೆ ಮಾಪನ ಕೇಂದ್ರಗಳು ಅತ್ಯಂತ ಪ್ರಮುಖವಾಗಿವೆ. ಜಿಲ್ಲೆಯಲ್ಲಿರುವ ಒಟ್ಟು 201 ಮಳೆ ಮಾಪನ ಕೇಂದ್ರಗಳಲ್ಲಿ ಪೈಕಿ ದುರಸ್ತಿಯಲ್ಲಿರುವ ಅಥವಾ ಸರಿಯಾಗಿ ಕಾರ್ಯನಿರ್ವಹಿಸದ ಎಲ್ಲಾ ಕೇಂದ್ರಗಳನ್ನು ತಕ್ಷಣವೇ ದುರಸ್ತಿಗೊಳಿಸಿ, ಅವುಗಳು ಸುಸ್ಥಿತಿಯಲ್ಲಿ ಇರುವಂತೆ ನೋಡಿಕೊಳ್ಳಬೇಕು. ಯಾವುದೇ ಕೇಂದ್ರವನ್ನು ದುರಸ್ತಿ ಮಾಡಲು ಸಾಧ್ಯವಿಲ್ಲದಿದ್ದರೆ, ಅದನ್ನು ಹಾಗೆಯೇ ಬಿಡದೇ ತಕ್ಷಣವೇ ವಿಲೇವಾರಿ ಮಾಡಿ, ಹೊಸ ಮಳೆ ಮಾಪನ ಉಪಕರಣಗಳನ್ನು ಅಳವಡಿಸಬೇಕು. ಪ್ರತಿ ಪಂಚಾಯತಿ ಮಟ್ಟದಲ್ಲಿ ಮಳೆ ಮಾಪನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಕೆಲವು ಪಂಚಾಯತಿಗಳಲ್ಲಿ ಈ ಕೇಂದ್ರಗಳು ಇಲ್ಲದೇ ಇದ್ದಲ್ಲಿ, ಅಂತಹ ಸ್ಥಳಗಳನ್ನು ಗುರುತಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ನಿರ್ದೇಶನ ನೀಡಿದರು.

## ಶುದ್ಧ ಕುಡಿಯುವ ನೀರು ಸರಬರಾಜಿಗೆ ಸೂಚನೆ

ಮಳೆಗಾಲದಲ್ಲಿ ಸಾರ್ವಜನಿಕರಿಗೆ ಯಾವುದೇ ಕಾರಣಕ್ಕೂ ಕಲುಷಿತ ನೀರು ಸರಬರಾಜಾಗದಂತೆ ಅಧಿಕಾರಿಗಳು ತೀವ್ರ ನಿಗಾವಹಿಸಬೇಕು ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮಳೆಗಾಲದಲ್ಲಿ ಪೈಪ್‌ಲೈನ್‌ಗಳ ಮೂಲಕ ನೀರು ಸರಬರಾಜು ಮಾಡುವಾಗ ವಿಶೇಷ ಎಚ್ಚರಿಕೆ ಅಗತ್ಯ. ಕೆಲವು ಕಡೆಗಳಲ್ಲಿ ಪೈಪ್‌ಗಳನ್ನು ಸರಿಯಾಗಿ ಜೋಡಿಸದೇ ಇರುವುದರಿಂದ ನೀರು ನಿಂತು ಪಾಚಿ ಕಟ್ಟಿಕೊಳ್ಳುತ್ತದೆ. ನೀರು ಸರಬರಾಜು ಸ್ಥಗಿತಗೊಂಡು, ಬಳಿಕ ಮತ್ತೆ ಮೋಟಾರ್ ಆನ್ ಮಾಡಿದಾಗ ಸುತ್ತಮುತ್ತಲಿನ ಕಲುಷಿತ ನೀರು ಪೈಪ್‌ಲೈನ್‌ಗೆ ಮರುಸಂಗ್ರಹಣೆ (ಸಕ್ಷನ್) ಆಗುವ ಅಪಾಯ ಇರುತ್ತದೆ. ಇದರಿಂದಾಗಿ ಕಲುಷಿತ ನೀರು ಸಾರ್ವಜನಿಕರಿಗೆ ಸರಬರಾಜಾಗುವ ಸಾಧ್ಯತೆ ಇರುತ್ತದೆ ಎಂದು ಎಚ್ಚರಿಸಿದರು.

ಕಲುಷಿತ ನೀರು ಸೇವನೆಯಿಂದ ಸಾರ್ವಜನಿಕರ ಆರೋಗ್ಯ ಹದಗೆಡುತ್ತದೆ. ಈ ಹಿಂದೆ ಕಲುಷಿತ ನೀರು ಕುಡಿದು ಕೆಲವರು ಮೃತಪಟ್ಟ ಉದಾಹರಣೆಗಳೂ ಇವೆ. ಇಂತಹ ಘಟನೆಗಳು ಮರುಕಳಿಸದಂತೆ ವಾಟರ್ ಸರಬರಾಜು ಇಂಜಿನಿಯರ್‌ಗಳು, ಜೂನಿಯರ್ ಹಾಗೂ ಅಸಿಸ್ಟೆಂಟ್ ಇಂಜಿನಿಯರ್‌ಗಳು ತಳಮಟ್ಟದಲ್ಲಿ ಪರಿಶೀಲನೆ ನಡೆಸಬೇಕು. ಇಡೀ ಜಿಲ್ಲೆಯಲ್ಲಿ ಇಂತಹ ಯಾವುದೇ ಪರಿಸ್ಥಿತಿ ನಿರ್ಮಾಣವಾಗದಂತೆ ನೋಡಿಕೊಳ್ಳುವುದು ನಿಮ್ಮ ಜವಾಬ್ದಾರಿ. ಇದರಲ್ಲಿ ಯಾವುದೇ ಲೋಪ ಕಂಡುಬಂದು ಅನಾಹುತಗಳಾದರೆ ನೇರವಾಗಿ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅಧಿಕಾರಿಗಳಿಗೆ ಎಚ್ಚರಿಸಿದರು.

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ : ವಕ್ಫ್ ಸಂಸ್ಥೆಗಳಲ್ಲಿ ಜಾಗೃತಿ ಮೂಡಿಸಲು ಜಿಲ್ಲಾ ವಕ್ಫ್ ಅಧಿಕಾರಿ ಸೂಚನೆ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಭಾರತ ಚುನಾವಣಾ ಆಯೋಗವು ಕರ್ನಾಟಕ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ 2026 ರ ಕುರಿತು ಜಿಲ್ಲೆಯ ಎಲ್ಲಾ ವಕ್ಫ್ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಸಮಗ್ರ ಜಾಗೃತಿ ಮೂಡಿಸುವಂತೆ ಜಿಲ್ಲಾ ವಕ್ಫ್ ಅಧಿಕಾರಿಗಳು ತಿಳಿಸಿದ್ದಾರೆ.

ಪ್ರಸ್ತುತ ರಾಜ್ಯಾದ್ಯಂತ ಮತದಾರರ ನೋಂದಣಿ ಜಾಗೃತಿ ಕಾರ್ಯಕ್ರಮಗಳು ನಡೆಯುತ್ತಿದ್ದು, ಇದರ ಭಾಗವಾಗಿ ಪ್ರಾರಂಭಿಸಲಾಗಿರುವ ವಿಶೇಷ ತೀವ್ರ ಪರಿಷ್ಕರಣೆ ಅತ್ಯಂತ ನಿರ್ಣಾಯಕ ಪ್ರಕ್ರಿಯೆಯಾಗಿದೆ. ಈ ಅಭಿಯಾನವು ಹೊಸ ಅರ್ಹ ಮತದಾರರನ್ನು ನೋಂದಾಯಿಸುವ, ಮತದಾರರ ಪಟ್ಟಿಯಲ್ಲಿರುವ ದೋಷಗಳನ್ನು ಸರಿಪಡಿಸುವ ಮತ್ತು ಕುಟುಂಬದ ಸದಸ್ಯರ ಹೆಸರುಗಳನ್ನು ಒಟ್ಟಿಗೆ ಜೋಡಿಸುವ ಮೂಲಕ ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ನವೀಕರಿಸುವ ಉದ್ದೇಶ ಹೊಂದಿದೆ. ಅರ್ಹವಿರುವ ಯಾವುದೇ ಒಬ್ಬ ನಾಗರಿಕನೂ ಸಹ ರಾಜ್ಯದ ನವೀಕರಿಸಿದ ಚುನಾವಣಾ ಪಟ್ಟಿಯಿಂದ ವಂಚಿತರಾಗಬಾರದು ಎನ್ನುವುದು ಇದರ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದ್ದಾರೆ.

**ವಕ್ಫ್ ಸಂಸ್ಥೆಗಳಿಗೆ ನೀಡಿರುವ ಸೂಚನೆಗಳು:**

**ಶುಕ್ರವಾರದ ಖುತ್ಬಾದಲ್ಲಿ ಜಾಗೃತಿ:** ಜಿಲ್ಲೆಯಾದ್ಯಂತದ ಎಲ್ಲಾ ವಕ್ಫ್ ಸಂಸ್ಥೆಗಳ ಅಧ್ಯಕ್ಷರು, ಪೇಶ್ ಇಮಾಮ್‌ಗಳು ಹಾಗೂ ಉಲೇಮಾಗಳು ಪವಿತ್ರ ಜುಮ್ಮಾ ಪ್ರಾರ್ಥನೆಯ ಸಮಯದ ಖುತ್ಬಾದಲ್ಲಿ ಎಸ್.ಐ.ಆರ್–2026 ಪ್ರಕ್ರಿಯೆಯ ಮಹತ್ವದ ಬಗ್ಗೆ ಸಾರ್ವಜನಿಕರಿಗೆ ವಿವರಿಸಬೇಕು.

**ಮಾಹಿತಿ ಪ್ರದರ್ಶನ:** ಪ್ರತಿಯೊಂದು ವಕ್ಫ್ ಸಂಸ್ಥೆಯು ತನ್ನ ವ್ಯಾಪ್ತಿಯಲ್ಲಿ ಎಸ್.ಐ.ಆರ್ 2026 ರ ಕಾಲಮಿತಿ ಮತ್ತು ಸಂಬಂಧಪಟ್ಟ ಬಿ.ಎಲ್.ಓ ಗಳ ಪ್ರದೇಶವಾರು ಸಂಪರ್ಕ ಸಂಖ್ಯೆಗಳನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು.

**ಸಹಾಯ ಕೇಂದ್ರಗಳ ಸ್ಥಾಪನೆ:** ಸಾರ್ವಜನಿಕರಿಗೆ ಮತದಾರರ ಪಟ್ಟಿಯ ಪರಿಶೀಲನೆ ಹಾಗೂ ನೋಂದಣಿಗೆ ನೆರವಾಗಲು ಆಯಾ ಪ್ರದೇಶದ ಮಸೀದಿಗಳಲ್ಲಿ ತಾತ್ಕಾಲಿಕ ಸಹಾಯ ಕೇಂದ್ರಗಳನ್ನು ಸ್ಥಾಪಿಸಬೇಕು.

ಕರ್ನಾಟಕ ಮುಖ್ಯ ಚುನಾವಣಾ ಅಧಿಕಾರಿಗಳು ಜಾರಿಗೊಳಿಸಿರುವ ಅಧಿಕೃತ ಕಾಲಮಿತಿಯ ಬಗ್ಗೆ ಸಾರ್ವಜನಿಕರಿಗೆ ಸಂಪೂರ್ಣವಾಗಿ ಮಾಹಿತಿ ತಲುಪಿಸುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ವಕ್ಫ್ ಸಂಸ್ಥೆಗಳ ಅಧ್ಯಕ್ಷರು, ಕಾರ್ಯದರ್ಶಿಗಳು, ಆಡಳಿತಾಧಿಕಾರಿಗಳು ಹಾಗೂ ಮುತವಲ್ಲಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಹಾಸನ ತುಮಕೂರು ಹಾಗೂ ಮಂಡ್ಯ ಜಿಲ್ಲೆಗಳಲ್ಲಿ ಅಕ್ರಮ ಬೀಜ ದಾಸ್ತಾನು ಜಪ್ತಿ

■ **ಗಣಿನಾಡವಾಣಿ ವಾರ್ತೆ, ಬೆಂಗಳೂರು**



ಕೃಷಿ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ನೇತೃತ್ವದ ಪ್ರತ್ಯೇಕ ತಂಡಗಳು ರಾಜ್ಯದ ಹಾಸನ ತುಮಕೂರು ಹಾಗೂ ಮಂಡ್ಯ ಜಿಲ್ಲೆಗಳಲ್ಲಿ ವಿವಿಧ ರಸಗೊಬ್ಬರ ಮಾರಾಟ ಕೇಂದ್ರಗಳಿಗೆ ಭೇಟಿ ನೀಡಿ ಅನಧಿಕೃತವಾಗಿ ಸಂಗ್ರಹಿಸಲಾಗಿದ್ದ ಬೀಜ ಮತ್ತು ಸೂಕ್ಷ್ಮ ಪೋಷಕಾಂಶಗಳನ್ನು ವಶಪಡಿಸಿಕೊಂಡಿದ್ದಾರೆ. ಅನಧಿಕೃತವಾಗಿ ಬೀಜ, ರಸಗೊಬ್ಬರ ದಾಸ್ತಾನು, ಮಾರಾಟ ನಿಯಂತ್ರಿಸಲು ಕೃಷಿ ಇಲಾಖೆ ಆಯುಕ್ತರಾದ ಡಾ.ಬಿ.ಸಿ.ಸತೀಶ್ ಅವರ ಸೂಚನೆ ಮೇರೆಗೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕೃಷಿ ಅಧಿಕಾರಿಗಳು ಮಿಂಚಿನ ಕಾರ್ಯಾಚರಣೆ ನಡೆಸುತ್ತಿದ್ದಾರೆ.

ಹಾಸನ ಜಿಲ್ಲೆ ಸಾಲಗಾಮೆ ಹೋಬಳಿಯ ಕೊಂಡಜ್ಜಿಕೊಪ್ಪಲುವಿನ ಕಾರ್ತಿಕ ಟ್ರೇಡರ್‌ನಲ್ಲಿ ಬೀಜ ಕಾಯ್ದೆ 1966 ಉಲ್ಲಂಘಿಸಿ ಅನುಮತಿ ಇಲ್ಲದೇ ದಾಸ್ತಾನು ಮಾಡಲಾಗಿದ್ದ ಸುಮಾರು 85 ಸಾವಿರ ರೂ. ಮೌಲ್ಯದ 180 ಕೆ.ಜಿ. ಹೈಬ್ರೀಡ್ ಮೆಕ್ಕೆಜೋಳ ಬೀಜಗಳನ್ನು, ಅರಸೀಕೆರೆ ತಾಲ್ಲೂಕಿನ ಜಾವಗಲ್ ಹೋಬಳಿಯ ಪುಷ್ಪಗಿರಿ ಅಗ್ರೋ ಕೇಂದ್ರದಲ್ಲಿ ಅನಧಿಕೃತವಾಗಿ ಸಂಗ್ರಹಿಸಿದ್ದ ಸುಮಾರು 12 ಸಾವಿರ ರೂ.ಮೌಲ್ಯದ 30 ಕೆ.ಜಿ. ಹೈಬ್ರಿಡ್ ಮೆಕ್ಕೆಜೋಳ ಹಾಗೂ ಬೇಲೂರು ತಾಲೂಕಿನ ಅರೇಹಳ್ಳಿ ಹೋಬಳಿಯ ಮದಿಹಳ್ಳಿಯ ಶ್ರೀ ವೆಂಕಟೇಶ್ವರ ಟ್ರೇಡರ್‌ನಲ್ಲಿ ಕಾನೂನು ಉಲ್ಲಂಘಿಸಿ ದಾಸ್ತಾನು ಮಾಡಲಾಗಿದ್ದ ಸುಮಾರು 1.77 ಲಕ್ಷ ಮೌಲ್ಯದ 88 ಚೀಲ ಯೂರಿಯಾ, ಪಾಸ್ಫೋ ಜಿಪ್ಸಮ್ ಗ್ರ್ಯಾನ್ಯುಲ್ಸ್ ವಶಪಡಿಸಿಕೊಂಡಿದ್ದಾರೆ.

ತುಮಕೂರು ಜಿಲ್ಲೆ ಮಧುಗಿರಿ ತಾಲೂಕಿನ ಮಿಡಗೇಶಿ ಹೋಬಳಿಯ ಹಸಿರು ಹೈಟೆಕ್ ಸೀಡ್ಸ್ ಕೇಂದ್ರದಲ್ಲಿ ಅನಧಿಕೃತವಾಗಿ ದಾಸ್ತಾನು ಮಾಡಲಾಗಿದ್ದ ಸುಮಾರು 86 ಸಾವಿರ ರೂ.ಮೌಲ್ಯದ 22 ಲೀಟರ್ ಸೂಕ್ಷ್ಮ ಪೋಷಕಾಂಶ ಮಿಶ್ರಣವನ್ನು ವಶಪಡಿಸಿಕೊಳ್ಳಲಾಗಿದೆ.

ಮಂಡ್ಯ ತಾಲ್ಲೂಕಿನ ಇಂದುವಾಳದಲ್ಲಿ ಅನಧಿಕೃತವಾಗಿ ಸಾಗಾಟ ಮಾಡುತ್ತಿದ್ದ ಸುಮಾರು 300 ಚೀಲ ಎನ್.ಎಫ್.ಎಲ್. ಯೂರಿಯಾವನ್ನು ಮಂಡ್ಯದ ಕೃಷಿ ಅಧಿಕಾರಿಗಳು ಶನಿವಾರ ಜುಲೈ 4 ರಾತ್ರಿ ವಶಪಡಿಸಿಕೊಂಡಿದ್ದಾರೆ.

ಬೀಜ,ರಸಗೊಬ್ಬರ ಮಾರಾಟಗಾರರು ನಿಯಮಬಾಹಿರವಾಗಿ ಚಟುವಟಿಕೆಗಳನ್ನು ನಡೆಸುತ್ತಿರುವುದು ಕಂಡು ಬಂದರೆ ಕೃಷಿ ಇಲಾಖೆಯು ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುವುದು ಎಂದು ಕೃಷಿ ಇಲಾಖೆಯು ಪ್ರಕಟಣೆಯಲ್ಲಿ ತಿಳಿಸಿದೆ.

GANINAADA VAANI KANNADA DAILY MORNING OWNER , PUBLISHER, PRINTED BY Editor name : A.K.MALLIKARJUNA: HOUSE NO 84, WARD NO 22, MAHANANDI KOTTAM STREET, TALURU ROAD, AMBEDKARNAGAR, GANDHI NAGAR, BELLARY, KARNATAKA - 583101. Printed at PENNAOBALESHWARA ENTERPRISES#237, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583113.